ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 90 | ರಾಯಚೂರು Raichur | 22-09-2026 | ಮಂಗಳವಾರ Tuesday | ಪುಟ: Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685

## CSK ಮುಖ್ಯ ಕೋಚ್ ಆಗಿ ಮಾಜಿ RCB ಆಟಗಾರ ಜಹೀರ್ ಖಾನ್ ನೇಮಕ: ಕೊನೆಗೂ ವದಂತಿಗಳಿಗೆ ತೆರೆ!



# ರಾಮ ಮಂದಿರ ದೇಣಿಗೆ ಕಳ್ಳತನ: ಸಿಸಿಟಿವಿಯಲ್ಲಿ 105 ಘಟನೆಗಳು; ಸೆ.25ರೊಳಗೆ ಚಾರ್ಜ್‌ಶೀಟ್ ಸಲ್ಲಿಕೆ

ನವದೆಹಲಿ: ಅಯೋಧ್ಯೆ ರಾಮ ಮಂದಿರದ ದೇಣಿಗೆ ಕಳ್ಳತನ ಪ್ರಕರಣದ ತನಿಖೆಯಲ್ಲಿ ಮಹತ್ವದ ಬೆಳವಣಿಗೆಯಾಗಿದ್ದು, ದೇವಾಲಯದೊಳಗೆ ನಡೆದಿದ್ದ ಎನ್ನಲಾದ 105 ಕಳ್ಳತನ ಘಟನೆಗಳು ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿವೆ ಎಂದು ವಿಶೇಷ ತನಿಖಾ ತಂಡ (ಎಸ್‌ಐಟಿ) ಸುಪ್ರೀಂ ಕೋರ್ಟ್‌ಗೆ ಮಾಹಿತಿ ನೀಡಿದೆ.



ಪ್ರಕರಣದ ವಿಚಾರಣೆ ವೇಳೆ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು ಎಸ್‌ಐಟಿ ತನಿಖೆಯ ಸ್ಥಿತಿ ವರದಿಯನ್ನು ನ್ಯಾಯಾಲಯದ ಮುಂದೆ ಉಲ್ಲೇಖಿಸಿ, ತನಿಖೆ ಅಂತಿಮ ಹಂತದಲ್ಲಿದ್ದು ಸೆಪ್ಟೆಂಬರ್ 25ರೊಳಗೆ ಚಾರ್ಜ್‌ಶೀಟ್ ಸಲ್ಲಿಸಲಾಗುವುದು ಎಂದು ತಿಳಿಸಿದರು. ಚಾರ್ಜ್‌ಶೀಟ್ ಸಲ್ಲಿಕೆಯಾದ ಬಳಿಕ ಕಾನೂನು ಪ್ರಕ್ರಿಯೆಯನ್ನು ಮುಂದುವರಿಸುವಂತೆ ಸಂಬಂಧಪಟ್ಟ ಕೆಳ ನ್ಯಾಯಾಲಯದ ಮ್ಯಾಜಿಸ್ಟ್ರೇಟ್‌ಗೆ ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿದೆ.

ಎಸ್‌ಐಟಿ ಸಲ್ಲಿಸಿರುವ ಸ್ಥಿತಿ ವರದಿಯಲ್ಲಿ ಪ್ರಕರಣಕ್ಕೆ ಸಂಬಂಧಿಸಿದಂತೆ ಈವರೆಗೆ ನಡೆದ ಬಂಧನಗಳು, ಸಾಕ್ಷಿಗಳ ಹೇಳಿಕೆಗಳು, ಸಿಸಿಟಿವಿ ದೃಶ್ಯಾವಳಿಗಳು ಹಾಗೂ ಇತರೆ ಸಾಕ್ಷ್ಯಗಳ ವಿವರಗಳನ್ನು ದಾಖಲಿಸಲಾಗಿದೆ. ಸಿಸಿಟಿವಿಯಲ್ಲಿ ದಾಖಲಾಗಿರುವ 105 ಘಟನೆಗಳಿಗೆ ಸಂಬಂಧಿಸಿದ 2ನೇ ಪುಟಕ್ಕೆ

# ಕಲ್ಯಾಣ ಕರ್ನಾಟಕ 371(ಜೆ) ಆದೇಶಗಳ ಅನುಷ್ಠಾನ ಪರಿಶೀಲನೆಗೆ ಸಚಿವ ಸಂಪುಟ ಉಪಸಮಿತಿ ಪುನರ್‌ರಚನೆ

ಬೆಂಗಳೂರು, ಸೆ.21: ಭಾರತ ಸಂವಿಧಾನದ ಅನುಚ್ಛೇದ 371(ಜೆ) ಅಡಿ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ನೀಡಿರುವ ವಿಶೇಷ ಸ್ಥಾನಮಾನಕ್ಕೆ ಸಂಬಂಧಿಸಿದಂತೆ ಹೊರಡಿಸಲಾದ ಆದೇಶಗಳ ಅನುಷ್ಠಾನದ ಪ್ರಗತಿಯನ್ನು ಪರಿಶೀಲಿಸಲು ಸರ್ಕಾರ ಸಚಿವ ಸಂಪುಟ ಉಪಸಮಿತಿಯನ್ನು ಪುನರ್‌ರಚಿಸಿದೆ.

ಈ ಕುರಿತು ಕರ್ನಾಟಕ ಸರ್ಕಾರದ ಸಚಿವಾಲಯದಿಂದ ಸೆಪ್ಟೆಂಬರ್ 21ರಂದು ಅಧಿಕೃತ ಜ್ಞಾಪನ ಹೊರಡಿಸಲಾಗಿದ್ದು, ಕಲ್ಯಾಣ ಕರ್ನಾಟಕ ಭಾಗಕ್ಕೆ ಸಂಬಂಧಿಸಿದ ಆದೇಶಗಳ ಅನುಷ್ಠಾನವನ್ನು ಪರಿಶೀಲಿಸುವ ನಿಟ್ಟಿನಲ್ಲಿ ಆರು ಮಂದಿ ಸಚಿವರನ್ನು ಒಳಗೊಂಡ ಉಪಸಮಿತಿಯನ್ನು ರಚಿಸಲಾಗಿದೆ.

ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣ ಪ್ರಕಾಶ್ ರುದ್ರಪ್ಪ ಪಾಟೀಲ್ ಅವರನ್ನು ಉಪಸಮಿತಿಯ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ.

ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ.



ಖಂಡ್ರೆ, ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ಸಂಗಪ್ಪ ತಂಗಡಗಿ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಸಿಂಗ್ ಅವರನ್ನು ಉಪಸಮಿತಿಯ ಸದಸ್ಯರನ್ನಾಗಿ ನೇಮಿಸಲಾಗಿದೆ.

ಅನುಚ್ಛೇದ 371(ಜೆ) ಅಡಿ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ದೊರೆತಿರುವ ವಿಶೇಷ ಸೌಲಭ್ಯಗಳಿಗೆ ಸಂಬಂಧಿಸಿದ ಸರ್ಕಾರದ ವಿವಿಧ ಆದೇಶಗಳು ಜಾರಿಯಾಗುತ್ತಿರುವ ರೀತಿ, ಅವುಗಳ ಅನುಷ್ಠಾನದ ಪ್ರಗತಿ ಹಾಗೂ ಸಂಬಂಧಿಸಿದ ಇಲಾಖೆಗಳ ಕಾರ್ಯವೈಖರಿಯನ್ನು ಈ ಉಪಸಮಿತಿ ಪರಿಶೀಲಿಸಲಿದೆ.

ಕರ್ನಾಟಕ ಸರ್ಕಾರದ ವ್ಯವಹಾರ ನಿರ್ವಹಣಾ ನಿಯಮಗಳು ಹಾಗೂ ಈ ಹಿಂದೆ ಹೊರಡಿಸಲಾಗಿದ್ದ ಆದೇಶಗಳ ಅನ್ವಯ ಸಚಿವ ಸಂಪುಟ ಉಪಸಮಿತಿಯನ್ನು ಪುನರ್ ರಚಿಸಲಾಗಿದೆ ಎಂದು ಅಧಿಕೃತ ಜ್ಞಾಪನದಲ್ಲಿ ತಿಳಿಸಲಾಗಿದೆ.

ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿವಿಧ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಇಲಾಖೆಯ ಸಂಬಂಧಪಟ್ಟ ಅಧಿಕಾರಿಗಳಿಗೆ ಈ ಆದೇಶದ ಪ್ರತಿಯನ್ನು ಕಳುಹಿಸಲಾಗಿದೆ.

ಕಲ್ಯಾಣ ಕರ್ನಾಟಕಕ್ಕೆ ಸಂವಿಧಾನದ 371(ಜೆ) ಅಡಿ ದೊರೆತಿರುವ ವಿಶೇಷ ಸ್ಥಾನಮಾನಕ್ಕೆ ಸಂಬಂಧಿಸಿದ ಯೋಜನೆಗಳು ಹಾಗೂ ಸೌಲಭ್ಯಗಳು ಪರಿಣಾಮಕಾರಿಯಾಗಿ ಜಾರಿಯಾಗುವ ನಿಟ್ಟಿನಲ್ಲಿ ಈ ಪುನರ್ ರಚಿತ ಉಪಸಮಿತಿಯ ಕಾರ್ಯ ಮಹತ್ವ ಪಡೆದುಕೊಂಡಿದೆ.

# ಎಕರೆಗೆ ₹50 ಸಾವಿರ ಬರ ಪರಿಹಾರಕ್ಕೆ ಆಗ್ರಹಿಸಿ ರೈತರ ಬೃಹತ್ ಪ್ರತಿಭಟನೆ

## ಟ್ರ್ಯಾಕ್ಟರ್, ಎತ್ತಿನ ಬಂಡಿಗಳೊಂದಿಗೆ ರೈತರ ಮೆರವಣಿಗೆ; 12 ಗಂಟೆ ವಿದ್ಯುತ್, ಸಮರ್ಪಕ ನೀರು ಪೂರೈಕೆಗೆ ಒತ್ತಾಯ

ರಾಯಚೂರು, ಸೆ.21: ಜಿಲ್ಲೆಯಲ್ಲಿ ಉಲ್ಬಣಿಸಿರುವ ಬರ ಪರಿಸ್ಥಿತಿಯಿಂದ ಬೆಳೆಗಳು ಒಣಗುತ್ತಿದ್ದು, ರೈತರು ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ಹಿನ್ನೆಲೆಯಲ್ಲಿ ಪ್ರತಿ ಎಕರೆಗೆ ₹50 ಸಾವಿರ ಬೆಳೆ ಪರಿಹಾರ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಮಾಜಿ ಶಾಸಕ ತಿಪ್ಪರಾಜು ಹಾವಲ್ದಾರ್ ನೇತೃತ್ವದಲ್ಲಿ ರಾಯಚೂರು ಗ್ರಾಮಾಂತರ ಬಿಜೆಪಿ ಘಟಕದಿಂದ ಸೋಮವಾರ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ನಡೆದ ಪ್ರತಿಭಟನಾ ಮೆರವಣಿಗೆಯಲ್ಲಿ ಗ್ರಾಮಾಂತರ ಪ್ರದೇಶದ ರೈತರು ಟ್ರ್ಯಾಕ್ಟರ್ ಹಾಗೂ ಎತ್ತಿನ ಬಂಡಿಗಳೊಂದಿಗೆ ಆಗಮಿಸಿ ಗಮನ ಸೆಳೆದರು. ಬಿಜೆಪಿ ಹಿರಿಯ ಮುಖಂಡರು, ಮಹಿಳಾ ಮುಖಂಡರು, ಕಾರ್ಯಕರ್ತರು ಹಾಗೂ ವಿವಿಧ ಗ್ರಾಮಗಳ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ಅಂಬೇಡ್ಕರ್ ವೃತ್ತದಲ್ಲಿ ಕೆಲಕಾಲ ಪ್ರತಿಭಟನಾ ಧರಣಿ ನಡೆಸಿದ ಪ್ರತಿಭಟನಾಕಾರರು ಹಲಗಿ ಬಾರಿಸಿ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಬಿಸಿಲನ್ನೂ ಲೆಕ್ಕಿಸದೆ ರಸ್ತೆಯಲ್ಲೇ ಕುಳಿತು ಪ್ರತಿಭಟನೆ ನಡೆಸಿದ ರೈತರು, ಬರದಿಂದ ಉಂಟಾಗಿರುವ ಸಂಕಷ್ಟಗಳಿಗೆ ಸರ್ಕಾರ ತಕ್ಷಣ ಸ್ಪಂದಿಸಬೇಕು ಎಂದು ಆಗ್ರಹಿಸಿದರು.

ಈ ವೇಳೆ ಮಾತನಾಡಿದ ಮಾಜಿ ಶಾಸಕ ತಿಪ್ಪರಾಜು



ಹಾವಲ್ದಾರ್, ಮಳೆ ಕೊರತೆಯಿಂದ ರಾಯಚೂರು ಗ್ರಾಮಾಂತರ ಭಾಗದಲ್ಲಿ ಬೆಳೆಗಳು ಒಣಗುತ್ತಿದ್ದು, ಕೃಷಿಕರು ಮಾಡಿದ ಬಂಡವಾಳವೂ ಕೈಗೆ ಸಿಗದಂತಹ ಪರಿಸ್ಥಿತಿ ಎದುರಾಗಿದೆ. ಮತ್ತೊಂದೆಡೆ ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಮೇವಿನ ಕೊರತೆಯೂ ಹೆಚ್ಚಾಗಿದೆ. ಇಂತಹ ಸಂದರ್ಭದಲ್ಲಿ ಸರ್ಕಾರ ತುರ್ತಾಗಿ ಬೆಳೆ ಹಾನಿ ಸಮೀಕ್ಷೆ ನಡೆಸಿ, ನಷ್ಟ ಅನುಭವಿಸಿರುವ ರೈತರಿಗೆ ಪ್ರತಿ ಎಕರೆಗೆ ಕನಿಷ್ಠ ₹50 ಸಾವಿರ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಗ್ರಾಮಾಂತರ ಭಾಗದಲ್ಲಿ ನೀರಾವರಿ ಸಮಸ್ಯೆಯೂ ಗಂಭೀರವಾಗಿದೆ. ತುಂಗಭದ್ರಾ ಎಡದಂಡೆ ಕಾಲುವೆಗೆ ನೀರು ತಡವಾಗಿ ಹರಿಸಿರುವುದರಿಂದ ಕಾಲುವೆಯ ಕೊನೆಯ ಭಾಗದ ರೈತರ ಜಮೀನುಗಳಿಗೆ ಸಮರ್ಪಕ ನೀರು ತಲುಪುತ್ತಿಲ್ಲ. ಗಣೇಕಲ್ ಜಲಾಶಯದಿಂದ ಕೊನೆಯ ಹಂತದ ಕಾಲುವೆಗಳಿಗೆ ಅಗತ್ಯ ಪ್ರಮಾಣದಲ್ಲಿ ನೀರು ಹರಿಸುವುದರ ಜೊತೆಗೆ ಎನ್‌ಆರ್‌ಬಿಸಿ ಕಾಲುವೆಗೂ ಸಮರ್ಪಕವಾಗಿ ನೀರು ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು.

ಶಕ್ತಿನಗರದ ಶಾಖೋತ್ಪನ್ನ ವಿದ್ಯುತ್ ಕೇಂದ್ರದಿಂದ ರಾಜ್ಯದ ವಿವಿಧ ಭಾಗಗಳಿಗೆ ವಿದ್ಯುತ್ ಪೂರೈಕೆಯಾಗುತ್ತಿದ್ದರೂ, ಸ್ಥಳೀಯ ರೈತರ ಕೃಷಿ ಪಂಪ್ ಸೆಟ್‌ಗಳಿಗೆ ಅಗತ್ಯ ಪ್ರಮಾಣದ ವಿದ್ಯುತ್ ಸಿಗುತ್ತಿಲ್ಲ ಎಂದು ಆರೋಪಿಸಿದ ಅವರು, ಸದ್ಯ 5ರಿಂದ 6 ಗಂಟೆಗಳಷ್ಟು ಮಾತ್ರ ವಿದ್ಯುತ್ ಲಭ್ಯವಾಗುತ್ತಿದೆ. ಬೆಳೆ ಉಳಿಸಿಕೊಳ್ಳಲು ರೈತರಿಗೆ ದಿನಕ್ಕೆ ನಿರಂತರ 12 ಗಂಟೆ ಗುಣಮಟ್ಟದ ವಿದ್ಯುತ್ ಪೂರೈಕೆ ಮಾಡಬೇಕು ಎಂದು ಒತ್ತಾಯಿಸಿದರು.

ರಾಯಚೂರು ಭಾಗದಲ್ಲಿಯೇ ಹೆಚ್ಚಿನ ವಿದ್ಯುತ್ ಉತ್ಪಾದನೆಯಾಗುತ್ತಿದ್ದರೂ ಸ್ಥಳೀಯ ರೈತರು ವಿದ್ಯುತ್ ಕೊರತೆಯಿಂದ ಸಂಕಷ್ಟ ಅನುಭವಿಸುವಂತಾಗಿದೆ. ಇದು ದೀಪದ ಬುಡದಲ್ಲೇ ಕತ್ತಲೆ ಎನ್ನುವ ಪರಿಸ್ಥಿತಿಗೆ ಸಾಕ್ಷಿಯಾಗಿದೆ ಎಂದು ತಿಪ್ಪರಾಜು ಹಾವಲ್ದಾರ್ ಅಸಮಾಧಾನ ವ್ಯಕ್ತಪಡಿಸಿದರು.

ಪ್ರತಿಭಟನೆಯುದ್ದಕ್ಕೂ ರೈತರಿಗೆ ಸಮರ್ಪಕ ನೀರು ಒದಗಿಸಿ, 12 ಗಂಟೆ ನಿರಂತರ ವಿದ್ಯುತ್ ನೀಡಿ, ಬೆಳೆ ಹಾನಿಗೆ ಪರಿಹಾರ ಬಿಡುಗಡೆ ಮಾಡಿ, ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರು ಕಲ್ಪಿಸಿ ಎಂಬ ಘೋಷಣೆಗಳು ಮೊಳಗಿದವು.

ಮಾಜಿ ಎಂಎಲ್‌ಸಿ ಎನ್. ಶಂಕ್ರಪ್ಪ ಮಾತನಾಡಿ, ಕೃಷಿಕರು ಆರ್ಥಿಕವಾಗಿ ಸದೃಢರಾಗಿದ್ದಾಗ ಮಾತ್ರ ಗ್ರಾಮೀಣ ಆರ್ಥಿಕತೆಯೂ ಬಲವಾಗಿರುತ್ತದೆ. ರೈತರ ಸಂಕಷ್ಟವನ್ನು ಸರ್ಕಾರ ನಿರ್ಲಕ್ಷಿಸದೆ, ಅವರ ಬೇಡಿಕೆಗಳಿಗೆ ಸ್ಪಂದಿಸಿ ತುರ್ತು ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಬಳಿಕ ಪ್ರತಿಭಟನಾಕಾರರು ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಮನವಿ ಸಲ್ಲಿಸಿದರು. ಬರಪೀಡಿತ ಪ್ರದೇಶಗಳಲ್ಲಿ ತಕ್ಷಣ ಬೆಳೆ ಹಾನಿ ಸಮೀಕ್ಷೆ ನಡೆಸುವುದು, ಎಕರೆಗೆ ₹50 ಸಾವಿರ ಪರಿಹಾರ ನೀಡುವುದು, ಕೃಷಿ ಪಂಪ್‌ಸೆಟ್‌ಗಳಿಗೆ 12 ಗಂಟೆ ನಿರಂತರ ವಿದ್ಯುತ್ ಪೂರೈಸುವುದು, ಗಣೇಕಲ್ ಜಲಾಶಯ ಹಾಗೂ ಎನ್‌ಆರ್‌ಬಿಸಿ ಕಾಲುವೆಗಳಿಗೆ ಅಗತ್ಯ ನೀರು ಹರಿಸುವುದು, ತುಂಗಭದ್ರಾ ಎಡದಂಡೆ ಕಾಲುವೆಯ ಕೊನೆಯ ಭಾಗದ ರೈತರಿಗೂ ನೀರು ತಲುಪಿಸುವುದು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರು ಮತ್ತು ಮೇವು ಒದಗಿಸುವಂತೆ ಮನವಿಯಲ್ಲಿ ಒತ್ತಾಯಿಸಲಾಯಿತು.

ಪ್ರತಿಭಟನೆಯಲ್ಲಿ ಶರಣಪ್ಪ, ಎನ್. ಕೇಶವರೆಡ್ಡಿ, ರವೀಂದ್ರ ಜಲ್ದಾರ್, ಮಹಾಂತೇಶ್, ನವೀನ್, ಜಗದೀಶ್, ಬಂಡೇಶ್, ಅಚ್ಚುತ್ ರೆಡ್ಡಿ, ಮಲ್ಲಿಕಾರ್ಜುನ, ರಂಗಪ್ಪ, ಖಾಸಿಂ ನಾಯಕ್ ಸೇರಿದಂತೆ ಬಿಜೆಪಿ ಹಿರಿಯ ಮುಖಂಡರು, ಮಹಿಳಾ ಮುಖಂಡರು, ಕಾರ್ಯಕರ್ತರು ಹಾಗೂ ವಿವಿಧ ಗ್ರಾಮಗಳ ರೈತರು ಭಾಗವಹಿಸಿದ್ದರು.

# ಆರ್‌ಎಸ್‌ಎಸ್ ಫ್ಯಾಸಿಸಂ ವಿರುದ್ಧ ಹೋರಾಟ ತೀವ್ರಗೊಳಿಸುತ್ತೇವೆ: ಪಿ.ಜೆ. ಜೇಮ್ಸ್



ರಾಯಚೂರು: ಆರ್‌ಎಸ್‌ಎಸ್‌ನ ರಾಜಕೀಯ ಮತ್ತು ಸೈದ್ಧಾಂತಿಕ ಪ್ರಭಾವದ ವಿರುದ್ಧ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುವುದು ಸೇರಿದಂತೆ ದೇಶದ ವಿವಿಧ ರಾಜಕೀಯ, ಸಾಮಾಜಿಕ ಹಾಗೂ ಆರ್ಥಿಕ ವಿಷಯಗಳ ಕುರಿತು ಸಿಪಿಐ(ಎಂಎಲ್) ರೆಡ್ ಸ್ಟಾರ್ ಪಕ್ಷದ 13ನೇ ಮಹಾಧಿವೇಶನದಲ್ಲಿ ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಗಿದೆ ಎಂದು ಪಕ್ಷದ ಪ್ರಧಾನ ಕಾರ್ಯದರ್ಶಿ ಪಿ.ಜೆ. ಜೇಮ್ಸ್ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಹಾಧಿವೇಶನದ ನಿರ್ಣಯಗಳ ಕುರಿತು ಮಾಹಿತಿ ನೀಡಿದ ಅವರು, ಸೆ.16ರಿಂದ 20ರವರೆಗೆ ರಾಯಚೂರಿನಲ್ಲಿ ಐದು ದಿನ ನಡೆದ ಮಹಾಧಿವೇಶನದಲ್ಲಿ ದೇಶದ 14 ರಾಜ್ಯಗಳು ಹಾಗೂ ಸಾಗರೋತ್ತರ ಸಮಿತಿಯನ್ನು ಪ್ರತಿನಿಧಿಸಿ ಸುಮಾರು 250 ಪ್ರತಿನಿಧಿಗಳು, ವೀಕ್ಷಕರು ಮತ್ತು ಸೌಹಾರ್ದ ಪ್ರತಿನಿಧಿಗಳು ಪಾಲ್ಗೊಂಡಿದ್ದರು ಎಂದರು.

ಮಹಾಧಿವೇಶನದಲ್ಲಿ ಪಕ್ಷದ ಮುಂದಿನ ರಾಜಕೀಯ ಹಾಗೂ ಸಂಘಟನಾತ್ಮಕ ಹಾದಿಯ ಕುರಿತು ವಿಸ್ತೃತ ಚರ್ಚೆ ನಡೆಸಲಾಗಿದ್ದು, 33 ಸದಸ್ಯರ ಕೇಂದ್ರ ಸಮಿತಿ, 13 ಸದಸ್ಯರ ಪಾಲಿಟ್ ಬ್ಯೂರೋ ಹಾಗೂ ಮೂವರು ಸದಸ್ಯರ ಕೇಂದ್ರ ನಿಯಂತ್ರಣ ಆಯೋಗವನ್ನು ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದರು.

ಪ್ರಸ್ತುತ ಜಾಗತಿಕ ಪರಿಸ್ಥಿತಿಯನ್ನು ಪ್ರಸ್ತಾಪಿಸಿದ ಜೇಮ್ಸ್, ಅಮೆರಿಕ ನೇತೃತ್ವದ ಸಾಮ್ರಾಜ್ಯಶಾಹಿ ನೀತಿಗಳು ಹಾಗೂ ಬಲಪಂಥೀಯ ಕಾರ್ಪೊರೇಟ್ ವ್ಯವಸ್ಥೆಯಿಂದ ವಿಶ್ವದ ವಿವಿಧ ಭಾಗಗಳ ಜನರು ಸಂಕಷ್ಟಕ್ಕೆ ಒಳಗಾಗುತ್ತಿದ್ದಾರೆ ಎಂದು ಆರೋಪಿಸಿದರು. ಪ್ಯಾಲೆಸ್ಟೈನ್‌ನಲ್ಲಿ ನಡೆಯುತ್ತಿರುವ ಸಂಘರ್ಷ ಹಾಗೂ ಇರಾನ್ ವಿರುದ್ಧದ ಕ್ರಮಗಳನ್ನೂ ಅವರು ಖಂಡಿಸಿದರು. ಜಗತ್ತಿನ ಹಲವೆಡೆ ಬಲಪಂಥೀಯ ರಾಜಕೀಯ ಶಕ್ತಿಗಳು ಬಲಗೊಳ್ಳುತ್ತಿರುವಂತೆಯೇ ಅವುಗಳ ವಿರುದ್ಧ ಜನರ ಪ್ರತಿರೋಧವೂ ಹೆಚ್ಚುತ್ತಿದೆ ಎಂದು ಹೇಳಿದರು.

ಭಾರತದಲ್ಲಿ ಆರ್‌ಎಸ್‌ಎಸ್‌ನ ಪ್ರಭಾವ ವಿಸ್ತರಿಸುತ್ತಿದೆ ಎಂದು ಆರೋಪಿಸಿದ ಅವರು, ದೇಶದ ಸಂಪನ್ಮೂಲಗಳು ಮತ್ತು 2ನೇ ಪುಟಕ್ಕೆ

# ಗಡಿನಾಡಿನ ಕನ್ನಡ ಶಾಲೆಗಳ ಉಳಿವಿಗೆ ಸರ್ಕಾರದ ವಿಶೇಷ ಪ್ರೋತ್ಸಾಹ ಅಗತ್ಯ: ಅಶೋಕ್ ಜೈನ್



ರಾಯಚೂರು, ಸೆ.21: ಗಡಿಭಾಗಗಳಲ್ಲಿ ಕನ್ನಡ ಮಾಧ್ಯಮ ಶಾಲೆಗಳನ್ನು ಉಳಿಸಿ ಬೆಳೆಸುವುದರ ಜೊತೆಗೆ ಕನ್ನಡದಲ್ಲಿ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಹೆಚ್ಚಿನ ಉತ್ತೇಜನ ನೀಡಲು ಸರ್ಕಾರ ವಿಶೇಷ ಯೋಜನೆಗಳನ್ನು ರೂಪಿಸಬೇಕು ಎಂದು ಕನ್ನಡ ಮಿತ್ರಕೂಟದ ಅಧ್ಯಕ್ಷ ಅಶೋಕ್ ಕುಮಾರ್ ಸಿ.ಕೆ. ಜೈನ್ ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕನ್ನಡ ಮಿತ್ರಕೂಟ ರಾಯಚೂರು ಹಾಗೂ ಗಡಿನಾಡು ಕನ್ನಡ ಸಂಘ, ಕೃಷ್ಣ ಇವರ ಸಹಯೋಗದಲ್ಲಿ 2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡ ಮಾಧ್ಯಮದಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸುವ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಸೆ.23ರಂದು ಬೆಳಿಗ್ಗೆ 10.30ಕ್ಕೆ ಕೃಷ್ಣದಲ್ಲಿರುವ ಜಿಲ್ಲಾ ಪಂಚಾಯಿತಿ ಪ್ರೌಢಶಾಲೆಯಲ್ಲಿ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಗಡಿಭಾಗದಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಾಧನೆಯನ್ನು ಗುರುತಿಸಿ ಗೌರವಿಸುವ ಮೂಲಕ ಅವರಲ್ಲಿ ಶಿಕ್ಷಣದ ಬಗ್ಗೆ ಮತ್ತಷ್ಟು ಉತ್ಸಾಹ ಹಾಗೂ ಆತ್ಮವಿಶ್ವಾಸ ಮೂಡಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ. ಇದರೊಂದಿಗೆ ಕನ್ನಡ ಶಾಲೆಗಳತ್ತ ವಿದ್ಯಾರ್ಥಿಗಳು ಹಾಗೂ ಪಾಲಕರಲ್ಲಿ ಆಸಕ್ತಿ ಹೆಚ್ಚಿಸುವ ಆಶಯವೂ ಕಾರ್ಯಕ್ರಮದ ಹಿಂದಿದೆ ಎಂದರು.

ಸಮಾರಂಭವನ್ನು ಅಶೋಕ್ ಕುಮಾರ್ ಸಿ.ಕೆ. ಜೈನ್ ಉದ್ಘಾಟಿಸಲಿದ್ದು, ಜಿಲ್ಲಾ ಪಂಚಾಯಿತಿ ಪ್ರೌಢಶಾಲೆಯ ಮುಖ್ಯಗುರು ಕಿಶೋರ್ ಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ. ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೂಸಗಿ ಹಾಗೂ ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಶರಣಿಕ ಕುಮಾರ ದೋಖಾ ವಿಶೇಷ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಗಡಿನಾಡು ಕನ್ನಡ ಸಂಘದ ಸಲಹಾ ಸಮಿತಿ ಸದಸ್ಯ ಮಲ್ಲನಗೌಡ, ಗ್ಯಾರೆ ನರಸಿಂಹಯ್ಯ ಶೆಟ್ಟಿ ಸೇರಿದಂತೆ 2ನೇ ಪುಟಕ್ಕೆ

# ಸೆ.23ರಂದು ಪ್ರಕಾಶ್ ರೈ ನೇತೃತ್ವದಲ್ಲಿ ಮತದಾರರ ಪಟ್ಟಿ ಕುರಿತು ಸಮಾಲೋಚನಾ ಸಭೆ



ರಾಯಚೂರು, ಸೆ.21: ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ಪ್ರಕ್ರಿಯೆ, ಕರಡು ಮತದಾರರ ಪಟ್ಟಿಯಲ್ಲಿನ ಬದಲಾವಣೆಗಳು ಹಾಗೂ ಅರ್ಹ ಮತದಾರರ ಹೆಸರು ಕೈಬಿಡುವ ಆತಂಕಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಸೆ.23ರಂದು ಸಂಜೆ 5 ಗಂಟೆಗೆ ನಗರದ ಟಿಪ್ಪು ಸುಲ್ತಾನ್ ಪಾರ್ಕ್‌ನಲ್ಲಿ ನಟ ಪ್ರಕಾಶ್ ರೈ ನೇತೃತ್ವದಲ್ಲಿ ಸಮಾಲೋಚನಾ ಸಭೆ ಆಯೋಜಿಸಲಾಗಿದೆ ಎಂದು ನಾಗರಿಕ ಮತ ಕಾವಲು ಸಮಿತಿಯ ಮಾರೆಪ್ಪ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ 18 ವರ್ಷ ಮೇಲ್ಪಟ್ಟ ವಯಸ್ಕರ ಜನಸಂಖ್ಯೆ ಮತ್ತು ಮತದಾರರ ಪಟ್ಟಿಯಲ್ಲಿರುವವರ ಸಂಖ್ಯೆಗೆ ಸಂಬಂಧಿಸಿದಂತೆ ಹಲವು ಪ್ರಶ್ನೆಗಳು ಉದ್ಭವಿಸಿರುವುದರಿಂದ ಚುನಾವಣಾ ಆಯೋಗ ಸಾರ್ವಜನಿಕರಿಗೆ ಸ್ಪಷ್ಟ ಮಾಹಿತಿ ನೀಡಬೇಕಾಗಿದೆ ಎಂದು ಒತ್ತಾಯಿಸಿದರು.

ಸೆನ್ಸಸ್ ಆಧಾರಿತ ಅಂಕಿ-ಅಂಶಗಳನ್ನು ಉಲ್ಲೇಖಿಸಿದ ಅವರು, ರಾಜ್ಯದಲ್ಲಿ 18 ವರ್ಷ ಮೇಲ್ಪಟ್ಟವರ ಸಂಖ್ಯೆ ಸುಮಾರು 5.8 ಕೋಟಿ ಎಂದು ಹೇಳಲಾಗುತ್ತಿದ್ದರೆ, ಎಸ್‌ಐಆರ್ ಪ್ರಕ್ರಿಯೆಯ ಕರಡು ಪಟ್ಟಿಯಲ್ಲಿ ಮತದಾರರ ಸಂಖ್ಯೆ ಸುಮಾರು 4.5 ಕೋಟಿಯಷ್ಟಿದೆ. ಈ ಅಂತರಕ್ಕೆ ಕಾರಣವೇನು ಎಂಬುದನ್ನು ಚುನಾವಣಾ ಆಯೋಗ ವಿವರಿಸಬೇಕು ಎಂದು ಹೇಳಿದರು.

ಎಸ್‌ಐಆರ್ ಪರಿಷ್ಕರಣೆಯ ಬಳಿಕದ ಕರಡು ಪಟ್ಟಿಯಲ್ಲಿ 4,46,80,151 ಮತದಾರರ ಹೆಸರು ದಾಖಲಾಗಿದ್ದು, ಅದಕ್ಕೂ ಮೊದಲು ಮತದಾರರ ಸಂಖ್ಯೆ 5,54,32,314 ಇತ್ತು ಎಂದು ಅವರು ಹೇಳಿದರು. ಪರಿಷ್ಕರಣೆ ವೇಳೆ 1,07,96,415 ಮಂದಿಯನ್ನು ಅಬ್ಸೆಂಟ್, ಶಿಫ್ಟೆಡ್, ಡೆಡ್, ಡುಪ್ಲಿಕೇಟ್ ಅಂಡ್ ಅದರ್ಸ್ (ASDDO) ವರ್ಗದಲ್ಲಿ ಗುರುತಿಸಿ ಕರಡು ಪಟ್ಟಿಯಿಂದ ಹೊರಗಿಡಲಾಗಿದೆ ಎಂಬ ಮಾಹಿತಿಯಿದೆ ಎಂದರು. 2ನೇ ಪುಟಕ್ಕೆ

# ಸ್ವಚ್ಛ ಭಾರತ್ ಮಿಷನ್: ವೈಯಕ್ತಿಕ ಗೃಹ ಶೌಚಾಲಯಗಳ ಸಮಗ್ರ ಪರಿಶೀಲನೆಗೆ ಚಾಲನೆ



ರಾಯಚೂರು, ಸೆ.21: ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಯೋಜನೆಯಡಿ ರಾಯಚೂರು ಜಿಲ್ಲೆಯನ್ನು ಜಿಲ್ಲೆಯೆಂದು ಘೋಷಿಸಲಾಗಿದ್ದರೂ, ಕೆಲವು ಅರ್ಹ ಕುಟುಂಬಗಳಿಗೆ ವೈಯಕ್ತಿಕ ಗೃಹ ಶೌಚಾಲಯಗಳು ನಿರ್ಮಾಣವಾಗದಿರುವುದು ಹಾಗೂ ದಾಖಲೆಗಳಲ್ಲಿ ಶೌಚಾಲಯ ನಿರ್ಮಿಸಲಾಗಿದೆ ಎಂದು ನಮೂದಿಸಿರುವ ಕೆಲವು ಪ್ರಕರಣಗಳಲ್ಲಿ ವಾಸ್ತವವಾಗಿ ಶೌಚಾಲಯಗಳು ಅಸ್ತಿತ್ವದಲ್ಲಿಲ್ಲದಿರುವುದು ಅಥವಾ ಬಳಕೆಯಲ್ಲಿಲ್ಲದಿರುವ ಕುರಿತು ದೂರುಗಳು ಸ್ವೀಕೃತವಾಗಿವೆ.

ಈ ಹಿನ್ನೆಲೆಯಲ್ಲಿ, ಜಿಲ್ಲೆಯಲ್ಲಿ ನಿರ್ಮಿಸಲಾಗಿರುವ ವೈಯಕ್ತಿಕ ಗೃಹ ಶೌಚಾಲಯಗಳ ಭೌತಿಕ ಪರಿಶೀಲನೆ, ಅನುದಾನದ ಬಳಕೆ, ಫಲಾನುಭವಿಗಳ ವಿವರಗಳು, ಶೌಚಾಲಯಗಳ ಪ್ರಸ್ತುತ ಸ್ಥಿತಿ ಹಾಗೂ ಬಳಕೆಯ ಕುರಿತು ಸಮಗ್ರವಾಗಿ ಪರಿಶೀಲಿಸಿ ವರದಿ ಸಲ್ಲಿಸುವಂತೆ ರಾಯಚೂರು ಜಿಲ್ಲಾ ಪಂಚಾಯತಿಯ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಈಶ್ವರ್ ಕಾಂದೂ ಅವರು ಸೂಚಿಸಿದ್ದಾರೆ.

ಸದರಿ ವಿಷಯವನ್ನು ಸಮಗ್ರವಾಗಿ ಪರಿಶೀಲಿಸುವ ಉದ್ದೇಶದಿಂದ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ತಂಡಗಳನ್ನು ರಚಿಸಲಾಗಿದೆ. ರಚಿಸಲಾದ ತಂಡಗಳು ಆಯಾ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿರುವ ಎಲ್ಲಾ ಗ್ರಾಮಗಳ ಪ್ರತಿಯೊಂದು ಮನೆಗೆ ಕಡ್ಡಾಯವಾಗಿ ಭೇಟಿ ನೀಡಿ, ವೈಯಕ್ತಿಕ ಗೃಹ ಶೌಚಾಲಯಗಳ ಲಭ್ಯತೆ, ನಿರ್ಮಾಣದ ಸ್ಥಿತಿ ಹಾಗೂ ಶೌಚಾಲಯಗಳ ಬಳಕೆಯ ಕುರಿತು ಪರಿಶೀಲನೆ ನಡೆಸಲಿವೆ.

ಸರ್ವೆ ಸಂದರ್ಭದಲ್ಲಿ "ಶೌಚಾಲಯ ಬಳಕೆ" ಕುರಿತು ನಿರ್ಮಲಾ ರಾಯಚೂರು ಮೊಬೈಲ್ ಅಪ್ಲಿಕೇಶನ್ನಲ್ಲಿ ಪ್ರತಿಯೊಂದು ಮನೆಗೆ ಸಂಬಂಧಿಸಿದ ವಿವರಗಳನ್ನು ಕಡ್ಡಾಯವಾಗಿ ದಾಖಲಿಸಬೇಕು. ಗ್ರಾಮ ಪಂಚಾಯತಿವಾರು ರಚಿಸಲಾದ ತಂಡಗಳು ದಿನಾಂಕ 21.09.2026ರಿಂದ ಸರ್ವೆ ಕಾರ್ಯವನ್ನು ಪ್ರಾರಂಭಿಸಿ 15 ದಿನಗಳೊಳಗಾಗಿ ಪೂರ್ಣಗೊಳಿಸಬೇಕು. ನಂತರ ಗ್ರಾಮ ಪಂಚಾಯತಿವಾರು ಹಾಗೂ ತಾಲೂಕುವಾರು 2ನೇ ಪುಟಕ್ಕೆ

## ಇಂದು ಗ್ರಾಹಕರ ಸಂವಾದ ಸಭೆ

ರಾಯಚೂರು ಸೆಪ್ಟಂಬರ್ 21 (ಕರ್ನಾಟಕ ವಾರ್ತೆ): ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ 02ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಕಚೇರಿಯಲ್ಲಿ ಸೆಪ್ಟಂಬರ್ 22ರ ಬೆಳಿಗ್ಗೆ 11ರಿಂದ ಮಧ್ಯಾಹ್ನ 1ರ ವರೆಗೆ ಗ್ರಾಹಕರ ಕುಂದುಕೊರತೆಯ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ವಿದ್ಯುತ್ ಸಮಸ್ಯೆಗಳ ದೂರುಗಳನ್ನು ನಿವಾರಿಸಿಕೊಳ್ಳಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ 02ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಗಪುರದ ದೀಕ್ಷಾಭೂಮಿ ಯಾತ್ರೆಗೆ ಅರ್ಜಿ ಆಹ್ವಾನ

ರಾಯಚೂರು ಸೆಪ್ಟಂಬರ್ 21 (ಕರ್ನಾಟಕ ವಾರ್ತೆ): ರಾಯಚೂರು ತಾಲೂಕು ಸಮಾಜ ಕಲ್ಯಾಣ ಇಲಾಖೆಯಿಂದ 2026-27ನೇ ಸಾಲಿನಲ್ಲಿ ಮಹಾರಾಷ್ಟದ ನಾಗಪುರದ ದೀಕ್ಷಾಭೂಮಿ ಯಾತ್ರೆಗೆ ಡಾ.ಬಿ.ಆರ್. ಅಂಬೇಡ್ಕರ್ ಅನುಯಾಯಿಗಳನ್ನು ನಾಗಪುರ ದೀಕ್ಷಾಭೂಮಿ ಯಾತ್ರೆ ಕೈಗೊಳ್ಳಲು ಕೆ.ಎಸ್.ಆರ್.ಟಿ.ಸಿ. ಮತ್ತು ಇತರೆ ಸಾರಿಗೆ ಬಸ್ಸು ಮತ್ತು ರೈಲಿನ ಮೂಲಕ ವ್ಯವಸ್ಥೆಯನ್ನು ಇಲಾಖೆಯಿಂದ ಕಲ್ಪಿಸಲಾಗುತ್ತಿದ್ದು, ದೀಕ್ಷಾಭೂಮಿಗೆ ಭೇಟಿ ನೀಡುವ ಅನುಯಾಯಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ ಲಿಂಕ್ https://swd.karnataka.gov.in ನಲ್ಲಿ ಅಕ್ಟೋಬರ್ 09ರೊಳಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರ ಮೊಬೈಲ್ ಸಂಖ್ಯೆ: 9480843042 ಅಥವಾ ರಾಯಚೂರು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯ ದೂರವಾಣಿ ಸಂಖ್ಯೆ: 8861112622ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮನೋರೋಗ ತಜ್ಞರು, ಸಾಮಾಜಿಕ ಕಾರ್ಯಕರ್ತರು ಹುದ್ದೆಗೆ ಅರ್ಜಿ ಆಹ್ವಾನ

ರಾಯಚೂರು ಸೆಪ್ಟಂಬರ್ 21 (ಕರ್ನಾಟಕ ವಾರ್ತೆ): ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಲಯದಡಿಯಲ್ಲಿ 2026-27ನೇ ಸಾಲಿಗೆ ರಾಯಚೂರು ಜಿಲ್ಲೆಯ ದೇವದುರ್ಗ, ಸಿಂಧನೂರು, ಮಾನವಿ, ಮಸ್ಕಿ, ಸಿರವಾರ ಹಾಗೂ ಮುದುಗಲ್ ತಾಲೂಕುಗಳಲ್ಲಿ ಮನೋರೋಗ ತಜ್ಞರ 06, ಸಾಮಾಜಿಕ ಕಾರ್ಯಕರ್ತರು 06 ಹುದ್ದೆಗಳನ್ನು ಒಳ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗೆ ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಮನೋರೋಗ ತಜ್ಞರ ಹುದ್ದೆಗಳಿಗೆ ಎಂ.ಬಿ.ಬಿ.ಎಸ್ ಎಂ.ಡಿ ಸೈಕ್ಯಾಟ್ರೀಸ್ಟ್ ಆಗಿರಬೇಕು. ಮತ್ತು ಸಾಮಾಜಿಕ ಕಾರ್ಯಕರ್ತರು-06 ಹುದ್ದೆಗಳಿಗೆ ಎಂ.ಎಸ್.ಡಬ್ಲೂ ಮೆಡಿಕಲ್ ಮತ್ತು ಸೈಕ್ಯಾಟ್ರಿಕ್ ಸೋಶಿಯಲ್ ವರ್ಕರ್ ಸ್ನಾತಕೊತ್ತರ ಪದವಿ ಆಗಿರಬೇಕು. ಮತ್ತು ಆರ್.ಸಿ.ಐ ಇಂದ ಅನುಮತಿಯಾಗಿರುವ ಪ್ರಮಾಣ ಪತ್ರ ಇರಬೇಕು. (ಸೂಕ್ತ ವಿದ್ಯಾರ್ಹತೆ ಮತ್ತು ಅನುಭವ ಆಧಾರಿತ) ಅರ್ಜಿದಾರರು ಸ್ವ-ಹಸ್ತಾಕ್ಷರದಿಂದ ಭರ್ತಿಮಾಡಿ ಹುದ್ದೆಗೆ ಸಂಬದಿಸಿದ ಎಲ್ಲಾ ದೃಡೀಕೃತ ದಾಖಲಾತಿಗಳು ಹಾಗೂ ಭಾವಚಿತ್ರದೊಂದಿಗೆ ಸೆಪ್ಟಂಬರ್ 23ರ ಸಂಜೆ 5.30 ಒಳಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಲಯ ವಿಭಾಗ ರಾಯಚೂರು ಇಲ್ಲಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8151896578ಗೆ ಸಂಪರ್ಕಿಸುವತೆ ಅಥವಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಲಯ ವಿಭಾಗಕ್ಕೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಡಿಗೆ ಆಧಾರದ ಮೇಲೆ ವಾಹನಗಳನ್ನು ಒದಗಿಸಲು ಆಸಕ್ತರಿಂದ ಅರ್ಜಿ ಆಹ್ವಾನ

ರಾಯಚೂರು ಸೆಪ್ಟಂಬರ್ 21 (ಕರ್ನಾಟಕ ವಾರ್ತೆ): ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಲಯದ ರಾಷ್ಟೀಯ ಆರೋಗ್ಯ ಅಭಿಯಾನ ರಾಷ್ಟಿಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದಡಿಯಲ್ಲಿ ಆರ್.ಬಿ.ಎಸ್.ಕೆ ತಂಡಗಳಿಗೆ ತಲಾ ಒಂದರತೆ ರಾಯಚೂರು ತಾಲ್ಲೂಕಿಗೆ 4, ದೇವದುರ್ಗ ತಾಲೂಕಿಗೆ 2, ಮಾನವಿ ತಾಲೂಕಿಗೆ 2, ಲಿಂಗಸೂಗುರು ತಾಲೂಕಿಗೆ 2 ಹಾಗೂ ಸಿಂಧನೂರು ತಾಲೂಕಿಗೆ 2 ವಾಹನಗಳಂತೆ 12 ವಾಹನಗಳನ್ನು ಹಾಗೂ ಜಿಲ್ಲಾ ಕಾರ್ಯಕ್ರಮ ಅನುಷ್ಠಾನ ಘಟಕಗಳಿಗೆ 4 ವಾಹನಗಳು ಚಾಲಕರೊಂದಿಗೆ ಒಟ್ಟು 16 ವಾಹನಗಳನ್ನು ಒಂದು ವರ್ಷದ ಅವಧಿಗೆ ಬಾಡಿಗೆ ಆಧಾರದ ಮೇಲೆ ಒದಗಿಸಲು ಆಸಕ್ತ ಮಾಲಿಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಹಳದಿ ಬೋರ್ಡನ ಟಾಟಾ ಇಂಡಿಗೋ, ಇಂಡಿಕಾ ವಿಸ್ಟಾ, ಜೆಸ್ಟ್, ಬೊಲೆರೊ, ಟಾಟಾ ಸುಮೋ, ವೆರಿಟೊ, ಸ್ವಿಫ್ಟ್ ಡಿಜೈರ್ ಟೂರ್ ಎರ್ಟಿಗಾ ಮುಂತಾದ ಎಸಿ ಟ್ಯಾಕ್ಸಿ ವಾಹನ 2022 ಮತ್ತು ನಂತರದ ಮಾದರಿ ವಾಹನಗಳನ್ನು ತಿಂಗಳಿಗೆ ಗರಿಷ್ಠ 2500 ಕಿ.ಮೀ. ವರೆಗೆ ಬಳಸಲಾಗುವುದು.

ಆಸಕ್ತರು ಅಕ್ಟೋಬರ್ 05ರೊಳಗಾಗಿ ಅರ್ಜಿಯನ್ನು https://kppp.karnataka.gov.in ನಲ್ಲಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಇಲಾಖೆಯ ಜಿಲ್ಲಾ ಯೋಜನಾ ನಿರ್ವಹಣಾ ಘಟಕಕ್ಕೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಅಮೃತ ವಾಣಿ**

ಶುಭ್ರವಾದ ಶ್ರೀಮಂತ ಬಟ್ಟೆಯಲ್ಲಿನ ಕೊಳಕಾದ ಬಡ ಮನಸ್ಸು ಕನಿಷ್ಠ.

**1593 ನೇಯ ದಿನಕ್ಕೆ ಏಮ್ಸ್ ಹೋರಾಟ**

## ಮನೆ ಕಟ್ಟುವ ಕೈಗಳಂತೆ ಮನಸ್ಸನ್ನೂ ದೃಢಗೊಳಿಸಿಕೊಳ್ಳಿ: ಬಿ.ಕೆ. ಸ್ಮಿತಾ ಅಕ್ಕ



ರಾಯಚೂರು: ನಗರದ ಪ್ರಜಾಪಿತಾ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ರಾಜಯೋಗಿನಿ ಬಿ.ಕೆ. ಸ್ಮಿತಾ ಅಕ್ಕ ಹಾಗೂ ಕಾರ್ಯದರ್ಶಿ ಬಿ.ಕೆ. ಶಾರದಾ ಅಕ್ಕ ಅವರ ನೇತೃತ್ವದಲ್ಲಿ ಕಟ್ಟಡ ಕಾರ್ಮಿಕರಿಗೆ ಗೌರವ ಸಮಾರಂಭ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮಕ್ಕೆ ಸುಮಾರು 16 ಮಂದಿ ಕಟ್ಟಡ ಕಾರ್ಮಿಕರನ್ನು ಆಹ್ವಾನಿಸಿ, ವೇದಿಕೆಯಲ್ಲಿ ಸಭಿಕರಿಗೆ ಪರಿಚಯಿಸಲಾಯಿತು. ಕಾರ್ಮಿಕರೊಂದಿಗೆ ಜ್ಯೋತಿ ಬೆಳಗಿಸುವ ಮೂಲಕ ಸಮಾರಂಭಕ್ಕೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ರಾಜಯೋಗಿನಿ ಬಿ.ಕೆ. ಸ್ಮಿತಾ ಅಕ್ಕ, ಕಟ್ಟಡ ಕಾರ್ಮಿಕರು ದೇಶದ ನಿರ್ಮಾಣ ಕ್ಷೇತ್ರದ ಪ್ರಮುಖ ಆಧಾರಸ್ತಂಭಗಳಾಗಿದ್ದಾರೆ. ಮನೆ ಅಥವಾ ಕಟ್ಟಡ ನಿರ್ಮಾಣಕ್ಕೆ ಮಾಲೀಕರು ಹಣ, ಮರಳು, ಸಿಮೆಂಟ್, ಇಟ್ಟಿಗೆ ಸೇರಿದಂತೆ ಅಗತ್ಯ ಸಾಮಗ್ರಿಗಳನ್ನು ಒದಗಿಸುತ್ತಾರೆ. ಆದರೆ ಅವುಗಳಿಗೆ ರೂಪ ನೀಡಿ ಸುಭದ್ರ ಕಟ್ಟಡ ನಿರ್ಮಿಸುವಲ್ಲಿ ಕಾರ್ಮಿಕರ ಶ್ರಮವೇ ಬಹುಮುಖ್ಯವಾಗಿದೆ. ಬಿಸಿಲು, ಮಳೆ ಎನ್ನದೆ ಬೆವರು ಸುರಿಸಿ ದುಡಿಯುವ ಅವರ ಸೇವೆ ಅತ್ಯಂತ ಶ್ರೇಷ್ಠವಾದದ್ದು ಎಂದು ಹೇಳಿದರು.

ಇತರರಿಗೆ ಭದ್ರವಾದ ಮನೆ ನಿರ್ಮಿಸಿಕೊಡುವ ಕಾರ್ಮಿಕರು ತಮ್ಮ ಮನಸ್ಸನ್ನೂ ದೃಢ ಹಾಗೂ ಏಕಾಗ್ರವಾಗಿಟ್ಟುಕೊಳ್ಳಬೇಕು. ಪ್ರತಿದಿನ ಕಾಮಗಾರಿ ಆರಂಭಿಸುವ ಮುನ್ನ ಹಾಗೂ ಕೆಲಸ ಮುಗಿಸಿದ ನಂತರ ಕನಿಷ್ಠ ಎರಡು ನಿಮಿಷ ಅದೇ ಸ್ಥಳದಲ್ಲಿ ದೇವರ ಸ್ಮರಣೆ ಅಥವಾ ಧ್ಯಾನ ಮಾಡಬೇಕು. ತಮಗೂ ಹಾಗೂ ಮನೆ ಕಟ್ಟಿಸಲು ಅವಕಾಶ ನೀಡಿದ ಮಾಲೀಕರ ಕುಟುಂಬಕ್ಕೂ ಸುಖ, ಶಾಂತಿ, ಆರೋಗ್ಯ ಮತ್ತು ನೆಮ್ಮದಿ ದೊರೆಯಲಿ ಎಂದು ಪ್ರಾರ್ಥಿಸಬೇಕು ಎಂದು ಸಲಹೆ ನೀಡಿದರು.

ಧ್ಯಾನ ಮತ್ತು ಸಕಾರಾತ್ಮಕ ಚಿಂತನೆಯಿಂದ ಮನಸ್ಸಿಗೆ ನೆಮ್ಮದಿ ದೊರೆಯುತ್ತದೆ. ಜೊತೆಗೆ ಕೆಲಸದ ಸ್ಥಳದಲ್ಲೂ ಶಾಂತಿಯುತ ವಾತಾವರಣ ನಿರ್ಮಾಣವಾಗಿ, ಕಾಮಗಾರಿಯೂ ಸುಗಮವಾಗಿ ನಡೆಯಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಬಳಿಕ ಎಲ್ಲಾ ಕಟ್ಟಡ ಕಾರ್ಮಿಕರಿಗೆ ತಿಲಕವಿಟ್ಟು, ಶಾಲು ಹಾಗೂ ಪೇಟ ತೊಡಿಸಿ ಸನ್ಮಾನಿಸಿ ಗೌರವಿಸಲಾಯಿತು.

ಸನ್ಮಾನ ಸ್ವೀಕರಿಸಿದ ಕಾರ್ಮಿಕರೊಬ್ಬರು ಮಾತನಾಡಿ, ಸಮಾಜದಲ್ಲಿ ಕಟ್ಟಡ ಕಾರ್ಮಿಕರ ಶ್ರಮಕ್ಕೆ ನಿರೀಕ್ಷಿತ ಗೌರವ ಸಿಗುವುದಿಲ್ಲ. ಆದರೆ ನಮ್ಮನ್ನು ದೇವರ ಮನೆಗೆ ಆಹ್ವಾನಿಸಿ, ಇಂತಹ ಗೌರವಯುತ ವೇದಿಕೆಯಲ್ಲಿ ಸಮಾನವಾಗಿ ಕುಳ್ಳಿರಿಸಿ, ಕುಟುಂಬದ ಸದಸ್ಯರಂತೆ ಕಾಣಿಸಿಕೊಂಡು ಸನ್ಮಾನಿಸಿರುವುದು ಜೀವನದಲ್ಲಿ ಮರೆಯಲಾಗದ ಕ್ಷಣವಾಗಿದೆ. ಇಂತಹ ಗೌರವವನ್ನು ಹಿಂದೆ ಎಂದಿಗೂ ಪಡೆದಿರಲಿಲ್ಲ ಎಂದು ಭಾವುಕರಾಗಿ ಹೇಳಿದರು.

ಕಾರ್ಯಕ್ರಮದಲ್ಲಿ ಈಶ್ವರೀಯ ವಿಶ್ವವಿದ್ಯಾಲಯದ ಪರಿವಾರದವರು ಹಾಗೂ ಇತರರು ಉಪಸ್ಥಿತರಿದ್ದರು.

## ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ಸಿಐಡಿ ತನಿಖೆಗೆ ಒಪ್ಪಿಸಲು ಡಿಎಚ್‌ಎಸ್ ಆಗ್ರಹ



ರಾಯಚೂರು: ಜಿಲ್ಲೆಯಲ್ಲಿ ನಡೆದ ದಲಿತರ ಮೇಲಿನ ಅತ್ಯಾಚಾರ, ಕೊಲೆ ಪ್ರಕರಣಗಳು ಹಾಗೂ ದೇವದುರ್ಗ ತಾಲೂಕಿನ ಹದ್ದಿನಾಳ ಗ್ರಾಮದ ಭೀಮಾನಂದ ಕೊಲೆ ಪ್ರಕರಣವನ್ನು ಸಿಐಡಿ ತನಿಖೆಗೆ ಒಪ್ಪಿಸಬೇಕು, ಸಂತ್ರಸ್ತ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು ಹಾಗೂ ಸಿಂಧನೂರು ತಾಲೂಕಿನ ವೀರಾಪಪುರ ಗ್ರಾಮದ ಭೂ ಒಡೆತನ ಯೋಜನೆಯ ಫಲಾನುಭವಿಗಳ ಹೆಸರಿಗೆ ಪಹಣಿ ಮಾಡಿಕೊಡಬೇಕು ಎಂದು ಆಗ್ರಹಿಸಿ ದಲಿತ ಹಕ್ಕುಗಳ ಸಮಿತಿ (ಡಿಎಚ್‌ಎಸ್) ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ದಲಿತ ಹಕ್ಕುಗಳ ಸಮಿತಿಯ ರಾಜ್ಯ ಸಮಿತಿಯ ಕರೆಯ ಮೇರೆಗೆ ಬೆಂಗಳೂರಿನ ಫ್ರೀಡಂ ಪಾರ್ಕ್ ಸೇರಿದಂತೆ ರಾಜ್ಯದ ವಿವಿಧ ಜಿಲ್ಲಾ ಮತ್ತು ತಾಲೂಕು ಕೇಂದ್ರಗಳಲ್ಲಿ ಪ್ರತಿಭಟನೆ ನಡೆಸಲಾಗುತ್ತಿದ್ದು, ಅದರ ಅಂಗವಾಗಿ ರಾಯಚೂರು ನಗರದ ಟಿಪ್ಪು ಸುಲ್ತಾನ್ ಗಾರ್ಡನ್‌ನಲ್ಲಿ ಪ್ರತಿಭಟನೆ ನಡೆಸಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಲಾಯಿತು.

ಪ್ರತಿಭಟನಾಕಾರರ ಪ್ರಕಾರ, ಆಗಸ್ಟ್ 4ರಂದು ದಲಿತ ಯುವ ಹೋರಾಟಗಾರ ಭೀಮಾನಂದ ಅವರ ಕೊಲೆ ಪ್ರಕರಣ, ಆಗಸ್ಟ್ 19ರಂದು ಸಿರವಾರ ತಾಲೂಕಿನ ಹೊಕ್ರಾಣಿ ಗ್ರಾಮದ ಅಶ್ವಿನಿ ಮೇಲಿನ ಅತ್ಯಾಚಾರ ಮತ್ತು ಕೊಲೆ ಪ್ರಕರಣ ಹಾಗೂ ಲಿಂಗಸುಗೂರು ತಾಲೂಕಿನ ಕರಡಕಲ್‌ನಲ್ಲಿ ಕಟ್ಟಿಗೆ ತರಲು ತೆರಳಿದ್ದ ರಾಣೆಮ್ಮ ಎಂಬ ಮಹಿಳೆಯ ಮೇಲಿನ ಲೈಂಗಿಕ ದೌರ್ಜನ್ಯ ಮತ್ತು ಕೊಲೆ ಪ್ರಕರಣಗಳು ಜಿಲ್ಲೆಯಲ್ಲಿ ಆತಂಕ ಸೃಷ್ಟಿಸಿವೆ. ಈ ಪ್ರಕರಣಗಳ ತನಿಖೆಯನ್ನು ಸಿಐಡಿಗೆ ವಹಿಸಿ, ಆರೋಪಿಗಳ ವಿರುದ್ಧ ಎಸ್‌ಸಿ/ಎಸ್‌ಟಿ ದೌರ್ಜನ್ಯ ತಡೆ ಕಾಯ್ದೆಯಡಿ ತ್ವರಿತ ವಿಚಾರಣೆ ನಡೆಸಿ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಿದರು.

ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಗೊಳಿಸಲು ಪ್ರತಿಯೊಂದು ಜಿಲ್ಲಾ ಕೇಂದ್ರದಲ್ಲೂ ತ್ವರಿತ ನ್ಯಾಯಾಲಯ ಸ್ಥಾಪಿಸಬೇಕು. ಸಂತ್ರಸ್ತ ಕುಟುಂಬಗಳಿಗೆ ತಲಾ ₹50 ಲಕ್ಷ ಪರಿಹಾರ ನೀಡುವುದರ ಜೊತೆಗೆ ಕುಟುಂಬದ ಒಬ್ಬರಿಗೆ ಸರ್ಕಾರಿ ಉದ್ಯೋಗ ಅಥವಾ ಐದು ಎಕರೆ ಕೃಷಿ ಭೂಮಿ ನೀಡಬೇಕು. ದೌರ್ಜನ್ಯ ಪ್ರಕರಣಗಳಿಗೆ ಸಂಬಂಧಿಸಿದ ಪೊಲೀಸ್ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಿ, ದೂರುಗಳಿಗೆ ತಕ್ಷಣ ಸ್ಪಂದಿಸುವ ವ್ಯವಸ್ಥೆ ರೂಪಿಸಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ಸಿಂಧನೂರು ತಾಲೂಕಿನ ಗುಂಜಳ್ಳಿ ಹೋಬಳಿಯ ವೀರಾಪಪುರ ಗ್ರಾಮದ ದಲಿತರಿಗೆ ಭೂ ಒಡೆತನ ಯೋಜನೆಯಡಿ 2005-06ನೇ ಸಾಲಿನಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಮೂಲಕ ಸರ್ವೆ ನಂ.184/★/5ರಲ್ಲಿ 9 ಎಕರೆ 7 ಗುಂಟೆ ಜಮೀನು ಮಂಜೂರಾಗಿದ್ದು, ಆಯ್ಕೆಯಾದ ಫಲಾನುಭವಿಗಳ ಹೆಸರಿಗೆ ಪಹಣಿ ಮಾಡಿಕೊಡಬೇಕು ಎಂದು ಆಗ್ರಹಿಸಲಾಯಿತು. ಅಲ್ಲದೆ, ವೀರಾಪಪುರ ಗ್ರಾಮದ ಸರ್ವೆ ನಂ.118ರಲ್ಲಿ 1982ರಲ್ಲಿ ಮಂಜೂರಾದ ಭೂಮಿಯ ಪಟ್ಟಾ ಹಾಗೂ ಪಹಣಿಯಲ್ಲೂ ಫಲಾನುಭವಿಗಳ ಹೆಸರು ದಾಖಲಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಹೆಚ್. ಪದ್ಮಾ, ಕೆ.ಜಿ. ವೀರೇಶ್, ಅಪ್ಪಣ್ಣ ಕಾಂಬಳೆ, ಬಸವಂತರಾಯಗೌಡ, ವೀರನಗೌಡ, ಕರಿಯಪ್ಪ ಅಚ್ಚೊಳಿ, ಕರಿಯಮ್ಮ ವೀರಾಪಪುರ, ಹುಸೇನಪ್ಪ ದಡೆಸೂಗೂರು, ನರಸಿಂಹಲು ವಡವಾಟಿ, ತಿಮಲಮ್ಮ, ನರಸಮ್ಮ, ಪಿ. ಯಲ್ಲಮ್ಮ, ಮಹಾದೇವಿ, ಜಮಲಮ್ಮ, ಶೇಖಮ್ಮ, ಹುಲಿಗೆಮ್ಮ, ಉತ್ತಮ್ಮ, ಸರೋಜಮ್ಮ, ನರಸಪ್ಪ, ಆನಂದ, ಶ್ರೀನಿವಾಸ, ಗಂಗಮ್ಮ, ದೇವಕಮ್ಮ, ತಾಯಮ್ಮ, ತಿಪ್ಪಮ್ಮ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಗಡಿನಾಡಿನ ಕನ್ನಡ ಶಾಲೆಗಳ ಉಳಿವಿಗೆ ಸರ್ಕಾರದ ವಿಶೇಷ ಪ್ರೋತ್ಸಾಹ ಅಗತ್ಯ: ಅಶೋಕ್ ಜೈನ್

ಹಲವು ಗಣ್ಯರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಗಡಿಭಾಗದಲ್ಲಿನ ಕನ್ನಡಿಗರು ಭಾಷೆ, ಶಿಕ್ಷಣ ಹಾಗೂ ಉದ್ಯೋಗಕ್ಕೆ ಸಂಬಂಧಿಸಿದ ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಸರ್ಕಾರ ಅವರ ಬೇಡಿಕೆಗಳಿಗೆ ಆದ್ಯತೆಯಿಂದ ಸ್ಪಂದಿಸಬೇಕಾಗಿದೆ. ಕನ್ನಡಿಗರಿಗೆ ಸರ್ಕಾರಿ ಉದ್ಯೋಗಗಳಲ್ಲಿ ಸೂಕ್ತ ಪ್ರಾತಿನಿಧ್ಯ ಕಲ್ಪಿಸುವುದರ ಜೊತೆಗೆ 371(ಜೆ) ಸೌಲಭ್ಯಗಳ ಸಮರ್ಪಕ ಅನುಷ್ಠಾನ ಹಾಗೂ ಗಡಿಭಾಗದ ಕನ್ನಡ ಶಾಲೆಗಳಿಗೆ ಅಗತ್ಯ ಮೂಲಸೌಕರ್ಯ ಒದಗಿಸಬೇಕು ಎಂದು ಆಗ್ರಹಿಸಿದರು.

ಕನ್ನಡ ಶಾಲೆಗಳ ಸ್ಥಿತಿಗತಿ ಹಾಗೂ ಗಡಿಭಾಗದ ಕನ್ನಡಿಗರು ಎದುರಿಸುತ್ತಿರುವ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರಲು ಮುಂದಿನ ದಿನಗಳಲ್ಲಿ ಸಂಘಟನೆ ವತಿಯಿಂದ ಹೋರಾಟ ರೂಪಿಸಲಾಗುವುದು. ಕೇವಲ ವಿದ್ಯಾರ್ಥಿಗಳನ್ನು ಸನ್ಮಾನಿಸುವುದಷ್ಟೇ ಅಲ್ಲದೆ, ಕನ್ನಡ ಮಾಧ್ಯಮ ಶಿಕ್ಷಣದ ಬಲವರ್ಧನೆಗೆ ನಿರಂತರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಅಗತ್ಯವಿದೆ ಎಂದು ಹೇಳಿದರು.

ಇದೇ ವೇಳೆ ಮಾತನಾಡಿದ ರಾಮಲಿಂಗಪ್ಪ, ಗಡಿಭಾಗದಲ್ಲಿ ಕನ್ನಡ ಪರ ಕಾರ್ಯಕ್ರಮಗಳಿಗೆ ಸರ್ಕಾರದಿಂದ ಅನುದಾನ ಲಭ್ಯವಾಗುತ್ತಿದ್ದರೂ ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದಿಂದ ನಿರೀಕ್ಷಿತ ಮಟ್ಟದಲ್ಲಿ ಸ್ಪಂದನೆ ದೊರೆಯುತ್ತಿಲ್ಲ ಎಂದು ಆರೋಪಿಸಿದರು. ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ಅವರು ಗಡಿಭಾಗದ ಕನ್ನಡಿಗರ ಸಮಸ್ಯೆಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಕನ್ನಡ ಭಾಷೆ, ಶಾಲೆಗಳು ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಅಭಿವೃದ್ಧಿಗೆ ಒತ್ತು ನೀಡಬೇಕು ಎಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಬಶೀರ್ ಅಹ್ಮದ್ ಹೊಸಮನಿ, ರುದ್ರಯ್ಯ ಗುಣರಿ, ಹನುಮಂತಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸ್ವಚ್ಛ ಭಾರತ್ ಮಿಷನ್: ವೈಯಕ್ತಿಕ ಗೃಹ ಶೌಚಾಲಯಗಳ ಸಮಗ್ರ ಪರಿಶೀಲನೆಗೆ ಚಾಲನೆ

ಮಾಹಿತಿಯನ್ನು ಕ್ರೋಢೀಕರಿಸಿ ವರದಿ ಸಲ್ಲಿಸಲು ಕ್ರಮ ಕೈಗೊಳ್ಳಲಾಗಿದೆ.

ಸರ್ವೆ ಕಾರ್ಯದ ಗುಣಮಟ್ಟ ಮತ್ತು ಪ್ರಗತಿಯನ್ನು ಖಚಿತಪಡಿಸುವ ಉದ್ದೇಶದಿಂದ, ಆಯಾ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತಿ ಹಾಗೂ ಸಹಾಯಕ ನಿರ್ದೇಶಕರು, ಪಂಚಾಯತ್ ರಾಜ್ ಅವರನ್ನು ಗ್ರಾಮ ಪಂಚಾಯತಿವಾರು ತಂಡಗಳು ಸಲ್ಲಿಸುವ ವರದಿಯನ್ನು ಪರಿಶೀಲಿಸುವುದು ಹಾಗೂ ಸರ್ವೆ ಕಾರ್ಯದ ಮೇಲ್ವಿಚಾರಣೆ ನಡೆಸುವ ನೋಡಲ್ ಅಧಿಕಾರಿಗಳಾಗಿ ನೇಮಿಸಲಾಗಿದೆ.

ಅದೇ ರೀತಿ, ಜಿಲ್ಲಾ ಪಂಚಾಯತಿಯ ವತಿಯಿಂದ ಸರ್ವೆ ಕಾರ್ಯದ ಮೇಲ್ವಿಚಾರಣೆ ಹಾಗೂ ಪ್ರಗತಿ ಪರಿಶೀಲನೆಗಾಗಿ ತಾಲೂಕುವಾರು ಸಮಾಲೋಚಕರನ್ನು ನೇಮಿಸಲಾಗಿದೆ ಎಂದು ತಿಳಿಸಲಾಗಿದೆ.

ಈ ಸಮಗ್ರ ಸರ್ವೆಯ ಮೂಲಕ ಜಿಲ್ಲೆಯಲ್ಲಿ ವೈಯಕ್ತಿಕ ಗೃಹ ಶೌಚಾಲಯಗಳ ನೈಜ ಸ್ಥಿತಿ, ಲಭ್ಯತೆ ಹಾಗೂ ಬಳಕೆಯ ಕುರಿತು ವಾಸ್ತವಿಕ ಮಾಹಿತಿಯನ್ನು ಸಂಗ್ರಹಿಸಿ, ಅಗತ್ಯವಿರುವ ಅರ್ಹ ಕುಟುಂಬಗಳನ್ನು ಗುರುತಿಸಿ ಮುಂದಿನ ಕ್ರಮ ಕೈಗೊಳ್ಳಲು ಅನುಕೂಲವಾಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೊದಲನೇ ಪುಟದಿಂದ

## ರಾಮ ಮಂದಿರ ದೇಣಿಗೆ ಕಳ್ಳತನ: ಸಿಸಿಟಿವಿಯಲ್ಲಿ 105 ಘಟನೆಗಳು; ಸೆ.25ರೊಳಗೆ ಚಾರ್ಜ್‌ಶೀಟ್ ಸಲ್ಲಿಕೆ

ದೃಶ್ಯಾವಳಿಗಳನ್ನು ಪರಿಶೀಲಿಸಿ ಆರೋಪಿಗಳನ್ನು ಗುರುತಿಸುವ ಪ್ರಕ್ರಿಯೆ ನಡೆಸಲಾಗಿದೆ ಎಂದು ನ್ಯಾಯಾಲಯಕ್ಕೆ ತಿಳಿಸಲಾಯಿತು.

ದೇಣಿಗೆಯ ರೂಪದಲ್ಲಿ ಬಂದ ಬೆಲೆಬಾಳುವ ವಸ್ತುಗಳಿಗೆ ಸಾಫ್ಟ್‌ವೇರ್ ಮೂಲಕ ರಶೀದಿ ಸಿದ್ಧಪಡಿಸಲಾಗುತ್ತಿದ್ದು, ಅವುಗಳನ್ನು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ (ಎಸ್‌ಬಿಐ) ಲಾಕರ್‌ಗಳಲ್ಲಿ ಸಂಗ್ರಹಿಸಲಾಗುತ್ತಿತ್ತು ಎಂಬ ಮಾಹಿತಿಯೂ ತನಿಖಾ ವರದಿಯಲ್ಲಿ ಉಲ್ಲೇಖವಾಗಿದೆ.

ವಿಚಾರಣೆಯ ವೇಳೆ ಅರ್ಜಿದಾರರ ಪರವಾಗಿ ಎಸ್‌ಐಟಿ ವರದಿಯ ಪ್ರತಿಯನ್ನು ನೀಡುವಂತೆ ಮನವಿ ಮಾಡಲಾಯಿತಾದರೂ, ಸುಪ್ರೀಂ ಕೋರ್ಟ್ ಅದನ್ನು ತಿರಸ್ಕರಿಸಿತು. ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ನೇತೃತ್ವದ ಪೀಠವು ಪ್ರಕರಣದ ವಿಚಾರಣೆಯನ್ನು ಸೆಷನ್ಸ್ ನ್ಯಾಯಾಲಯದಿಂದ ವರ್ಗಾಯಿಸುವ ಅಗತ್ಯವನ್ನು ಸದ್ಯಕ್ಕೆ ಕಂಡಿಲ್ಲ ಎಂದು ತಿಳಿಸಿದ್ದು, ಅಗತ್ಯವಿದ್ದಲ್ಲಿ ಮುಂದಿನ ಹಂತದಲ್ಲಿ ಸೂಕ್ತ ಆದೇಶ ನೀಡಲಾಗುವುದು ಎಂದು ಹೇಳಿತು.

ಪ್ರಕರಣ ಬೆಳಕಿಗೆ ಬಂದ ಬಳಿಕ ಈ ವರ್ಷದ ಮೇ-ಜೂನ್ ಅವಧಿಯಲ್ಲಿ ರಾಮ ಮಂದಿರ ಟ್ರಸ್ಟ್‌ನ ಉನ್ನತ ಅಧಿಕಾರಿಗಳಾದ ಚಂಪತ್ ರೈ ಮತ್ತು ಅನಿಲ್ ಮಿಶ್ರಾ ಅವರನ್ನು ಹುದ್ದೆಗಳಿಂದ ತೆಗೆದುಹಾಕಲಾಗಿತ್ತು ಎಂದು ತಿಳಿಸಲಾಗಿದೆ. ಬಳಿಕ ಟ್ರಸ್ಟ್‌ನಲ್ಲಿ ಹೊಸ ಆಡಳಿತಾತ್ಮಕ ವ್ಯವಸ್ಥೆ ಜಾರಿಗೆ ತಂದು, ಮಾಜಿ ಸೇನಾ ಅಧಿಕಾರಿ ಜಿತೇಂದ್ರ ಮಿಶ್ರಾ ಅವರನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ನೇಮಿಸಲಾಗಿದೆ.

ಜೂನ್ 2026ರಲ್ಲಿ ಪ್ರಕರಣಕ್ಕೆ ಸಂಬಂಧಿಸಿದಂತೆ ಎಂಟು ಮಂದಿಯ ವಿರುದ್ಧ ಪ್ರಕರಣ ದಾಖಲಿಸಲಾಗಿದ್ದು, ಎಲ್ಲ ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ತನಿಖಾ ಸಂಸ್ಥೆ ಈವರೆಗೆ ಆರೋಪಿಗಳಿಂದ ₹79.85 ಲಕ್ಷ ನಗದು ವಶಪಡಿಸಿಕೊಂಡಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ.

## ಆರ್‌ಎಸ್‌ಎಸ್ ಫ್ಯಾಸಿಸಂ ವಿರುದ್ಧ ಹೋರಾಟ ತೀವ್ರಗೊಳಿಸುತ್ತೇವೆ: ಪಿ.ಜೆ. ಜೇಮ್ಸ್

ಸಾರ್ವಜನಿಕ ಸಂಪತ್ತಿನ ಮೇಲೆ ದೊಡ್ಡ ಕಾರ್ಪೊರೇಟ್ ಸಂಸ್ಥೆಗಳ ಹಿಡಿತ ಹೆಚ್ಚುತ್ತಿದೆ ಎಂದರು. ಅದಾನಿ, ಅಂಬಾನಿ ಸೇರಿದಂತೆ ಕಾರ್ಪೊರೇಟ್ ಉದ್ಯಮಿಗಳಿಗೆ ಅನುಕೂಲವಾಗುವ ರೀತಿಯಲ್ಲಿ ಸರ್ಕಾರದ ನೀತಿಗಳು ರೂಪುಗೊಳ್ಳುತ್ತಿವೆ ಎಂಬುದು ತಮ್ಮ ಪಕ್ಷದ ನಿಲುವಾಗಿದೆ ಎಂದು ಹೇಳಿದರು.

ಪೊಲೀಸ್, ಆಡಳಿತ, ಶಿಕ್ಷಣ, ಸಂಸ್ಕೃತಿ ಸೇರಿದಂತೆ ವಿವಿಧ ಸಂಸ್ಥೆಗಳ ಮೇಲೆ ಬಲಪಂಥೀಯ ಸಿದ್ಧಾಂತದ ಪ್ರಭಾವ ಹೆಚ್ಚುತ್ತಿದೆ ಎಂದು ದೂರಿದ ಅವರು, ಅಲ್ಪಸಂಖ್ಯಾತರು, ದಲಿತರು ಹಾಗೂ ಮಹಿಳೆಯರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆಯೂ ಮಹಾಧಿವೇಶನದಲ್ಲಿ ಚರ್ಚಿಸಲಾಗಿದೆ ಎಂದು ವಿವರಿಸಿದರು.

ಜಾತಿ ವ್ಯವಸ್ಥೆಯ ಪ್ರಶ್ನೆಯನ್ನು ಕೇವಲ ಸಾಮಾಜಿಕ ಸಮಸ್ಯೆಯಾಗಿ ನೋಡದೆ, ಜನರ ಜೀವನೋಪಾಯ ಹಾಗೂ ಆರ್ಥಿಕ ಶೋಷಣೆಯ ಪ್ರಶ್ನೆಗಳೊಂದಿಗೆ ಜೋಡಿಸಿ ಹೋರಾಟ ರೂಪಿಸುವ ಅಗತ್ಯವಿದೆ. ಈ ವಿಷಯದಲ್ಲಿ ಭಾರತೀಯ ಕಮ್ಯುನಿಸ್ಟ್ ಚಳವಳಿಯ ಹಿಂದಿನ ಅನುಭವ ಮತ್ತು ತಪ್ಪುಗಳನ್ನು ಆತ್ಮವಿಮರ್ಶಾತ್ಮಕವಾಗಿ ಪರಿಶೀಲಿಸಬೇಕೆಂಬ ಅಭಿಪ್ರಾಯ ಮಹಾಧಿವೇಶನದಲ್ಲಿ ವ್ಯಕ್ತವಾಗಿದೆ ಎಂದು ಜೇಮ್ಸ್ ಹೇಳಿದರು.

ಕಾರ್ಮಿಕರು, ರೈತರು, ದಲಿತರು, ಆದಿವಾಸಿಗಳು, ಮಹಿಳೆಯರು ಸೇರಿದಂತೆ ಶೋಷಿತ ಸಮುದಾಯಗಳ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಹೋರಾಟ ನಡೆಸುವುದರ ಜೊತೆಗೆ ಪ್ರಗತಿಪರ ಹಾಗೂ ಪ್ರಜಾಸತ್ತಾತ್ಮಕ ಸಂಘಟನೆಗಳೊಂದಿಗೆ ವಿಶಾಲ ಐಕ್ಯತೆ ರೂಪಿಸಲು ಪಕ್ಷ ಮುಂದಾಗಲಿದೆ ಎಂದು ತಿಳಿಸಿದರು.

ಪಕ್ಷದ ಪಾಲಿಟ್ ಬ್ಯೂರೋ ಸದಸ್ಯ ಆರ್. ಮಾನಸಯ್ಯ ಮಾತನಾಡಿ, ಐದು ದಿನಗಳ ಮಹಾಧಿವೇಶನದಲ್ಲಿ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ವಿದ್ಯಮಾನಗಳಿಗೆ ಸಂಬಂಧಿಸಿದ ಒಟ್ಟು 19 ನಿರ್ಣಯಗಳನ್ನು ಸರ್ವಾನುಮತದಿಂದ ಅಂಗೀಕರಿಸಲಾಗಿದೆ ಎಂದು ಹೇಳಿದರು.

ಪ್ಯಾಲೆಸ್ಟೈನ್ ಮತ್ತು ಇರಾನ್ ಕುರಿತ ಅಂತಾರಾಷ್ಟ್ರೀಯ ಬೆಳವಣಿಗೆಗಳು, ಕೇಂದ್ರ ಸರ್ಕಾರದ ಆರ್ಥಿಕ ಹಾಗೂ ಶಿಕ್ಷಣ ನೀತಿಗಳು, ಎನ್‌ಆರ್‌ಸಿ ಮತ್ತು ಎಸ್‌ಐಆರ್, ಉಮರ್ ಖಾಲಿದ್ ಅವರ ಬಂಧನ, ಜಾತಿ ಗಣತಿ, ಕ್ಷೇತ್ರ ಮರುವಿಂಗಡಣೆ, ಕೇಂದ್ರರಾಜ್ಯ ಸಂಬಂಧಗಳು ಹಾಗೂ ರಾಜ್ಯಪಾಲರ ಹುದ್ದೆ ಸೇರಿದಂತೆ ಹಲವು ವಿಷಯಗಳ ಕುರಿತು ನಿರ್ಣಯಗಳನ್ನು ಅಂಗೀಕರಿಸಲಾಗಿದೆ ಎಂದು ತಿಳಿಸಿದರು.

ದೇಶದ ಒಕ್ಕೂಟ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಬೇಕು ಮತ್ತು ರಾಜ್ಯಗಳ ಹಕ್ಕುಗಳನ್ನು ಸಂರಕ್ಷಿಸಬೇಕು ಎಂಬ ಅಭಿಪ್ರಾಯವನ್ನೂ ಮಹಾಧಿವೇಶನ ವ್ಯಕ್ತಪಡಿಸಿದೆ. ರಾಜ್ಯಪಾಲರ ಹುದ್ದೆಯನ್ನು ರದ್ದುಗೊಳಿಸಬೇಕು ಎಂಬ ಪಕ್ಷದ ಬೇಡಿಕೆಯನ್ನು ಪುನರುಚ್ಚರಿಸಲಾಗಿದೆ ಎಂದು ಮಾನಸಯ್ಯ ಹೇಳಿದರು.

ಐದು ದಿನಗಳ ಮಹಾಧಿವೇಶನದ ಯಶಸ್ವಿ ಆಯೋಜನೆಗೆ ಸಹಕರಿಸಿದ ರಾಯಚೂರಿನ ವಿವಿಧ ಪ್ರಗತಿಪರ, ಪ್ರಜಾಸತ್ತಾತ್ಮಕ ಸಂಘಟನೆಗಳು ಹಾಗೂ ಸಾರ್ವಜನಿಕರಿಗೆ ಪಕ್ಷದ ವತಿಯಿಂದ ಕೃತಜ್ಞತೆ ಸಲ್ಲಿಸಲಾಯಿತು.

ಪತ್ರಿಕಾಗೋಷ್ಠಿಯಲ್ಲಿ ಪಕ್ಷದ ಮುಖಂಡರಾದ ಎಂ. ಗಂಗಾಧರ್, ಶಂಕರ್, ಬಿ. ರುದ್ರಯ್ಯ, ಕಬೀರ್, ತುಹಿನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸೆ.23ರಂದು ಪ್ರಕಾಶ್ ರೈ ನೇತೃತ್ವದಲ್ಲಿ ಮತದಾರರ ಪಟ್ಟಿ ಕುರಿತು ಸಮಾಲೋಚನಾ ಸಭೆ

ಇದರ ಜೊತೆಗೆ ಸುಮಾರು 43.81 ಲಕ್ಷ ಮತದಾರರಿಗೆ ನೋಟಿಸ್ ನೀಡುವ ಪ್ರಕ್ರಿಯೆ ನಡೆಯುತ್ತಿದೆ. ಅವರಲ್ಲಿ 23.45 ಲಕ್ಷ ಮತದಾರರ ವಿವರಗಳು 2002ರ ಮತದಾರರ ಪಟ್ಟಿಯೊಂದಿಗೆ ಮ್ಯಾಪಿಂಗ್ ಆಗಿಲ್ಲ ಎಂದು ಗುರುತಿಸಲಾಗಿದ್ದು, 20.35 ಲಕ್ಷ ಮಂದಿಯ ಎನ್ಯೂಮರೇಷನ್ ಫಾರಂಗಳಲ್ಲಿ ವಿವಿಧ ಅಸಂಗತತೆಗಳು ಕಂಡುಬಂದಿವೆ ಎಂದು ಚುನಾವಣಾ ಇಲಾಖೆಯ ಅಂಕಿ-ಅಂಶಗಳನ್ನು ಉಲ್ಲೇಖಿಸಿದರು.

2002ರ ಮತಪಟ್ಟಿಯೊಂದಿಗೆ ಸಂಪರ್ಕ ಕಂಡುಬಂದಿಲ್ಲ ಅಥವಾ ಮನೆಗೆ ಭೇಟಿ ನೀಡುವ ಸಂದರ್ಭದಲ್ಲಿ ಮತದಾರರು ಲಭ್ಯವಾಗಲಿಲ್ಲ ಎಂಬ ಕಾರಣಗಳನ್ನೇ ಆಧಾರವಾಗಿಸಿಕೊಂಡು ಹೆಸರು ತೆಗೆದುಹಾಕಬಾರದು ಎಂದು ಮಾರೆಪ್ಪ ಒತ್ತಾಯಿಸಿದರು. ಪ್ರತಿಯೊಬ್ಬ ಮತದಾರರ ನೈಜ ಸ್ಥಿತಿಯನ್ನು ಸಮರ್ಪಕವಾಗಿ ಪರಿಶೀಲಿಸಿದ ಬಳಿಕವೇ ಅಂತಿಮ ನಿರ್ಧಾರ ಕೈಗೊಳ್ಳಬೇಕು ಎಂದು ಹೇಳಿದರು.

ಸೆ.4ರ ವೇಳೆಗೆ 43,81,141 ನೋಟಿಸ್‌ಗಳು ಸಿದ್ಧಗೊಂಡಿದ್ದು, ಅವುಗಳಲ್ಲಿ 7,31,770 ನೋಟಿಸ್‌ಗಳನ್ನು ವಿತರಿಸಲಾಗಿತ್ತು. ಉಳಿದ 36,49,371 ನೋಟಿಸ್‌ಗಳು ವಿತರಣೆಗೆ ಬಾಕಿ ಇದ್ದವು ಎಂದು ಅವರು ತಿಳಿಸಿದರು. ನೋ ಮ್ಯಾಪಿಂಗ್ ಮತ್ತು ಅನಾಮಲೀಸ್ ವಿಭಾಗಕ್ಕೆ ಸೇರಿದ ಮತದಾರರಿಗೆ ಈ ನೋಟಿಸ್‌ಗಳನ್ನು ನೀಡಲಾಗುತ್ತಿದೆ ಎಂದರು.

ಮತದಾರರು ಒಂದು ವಿಳಾಸದಿಂದ ಮತ್ತೊಂದು ವಿಳಾಸಕ್ಕೆ ಸ್ಥಳಾಂತರಗೊಂಡ ಸಂದರ್ಭದಲ್ಲೂ ಸಮಸ್ಯೆಗಳು ಎದುರಾಗುತ್ತಿರುವುದಾಗಿ ಮಾರೆಪ್ಪ ಆರೋಪಿಸಿದರು. ವಿಳಾಸ ಬದಲಾವಣೆಯಾದಾಗ ಮತದಾರರ ಹೆಸರು ಹೊಸ ವಿಳಾಸಕ್ಕೆ ವರ್ಗಾವಣೆಗೊಳ್ಳಬೇಕಾದರೆ, ಕೆಲವರ ಹೆಸರು ಪಟ್ಟಿಯಿಂದಲೇ ಕೈಬಿಡಲಾಗಿದೆ ಎಂಬ ದೂರುಗಳು ಬಂದಿವೆ. ಎನ್ಯೂಮರೇಷನ್ ಫಾರಂ ವಿತರಣೆ ಹಾಗೂ ಸ್ವೀಕಾರದ ಪ್ರಕ್ರಿಯೆಯಲ್ಲಿಯೂ ಅಡಚಣೆಗಳಾಗಿರುವ ಕುರಿತು ಮಾಹಿತಿ ಲಭ್ಯವಾಗಿದೆ ಎಂದರು.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಮನೆಮನೆಗೆ ತೆರಳಿ ಮತದಾರರ ವಿವರ ಪರಿಶೀಲಿಸುವ ಜವಾಬ್ದಾರಿ ಹೊಂದಿರುವ ಬೂತ್ ಮಟ್ಟದ ಅಧಿಕಾರಿಗಳ (BLO) ಕಾರ್ಯನಿರ್ವಹಣೆಯ ಮೇಲೂ ನಿಗಾ ಇರಬೇಕು. ಯಾವುದೇ ಅರ್ಹ ಮತದಾರರ ಹೆಸರು ತಾಂತ್ರಿಕ ಅಥವಾ ದಾಖಲೆ ಸಂಬಂಧಿತ ಕಾರಣಗಳಿಂದ ತಪ್ಪಾಗಿ ಕೈಬಿಡದಂತೆ ಚುನಾವಣಾ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು ಎಂದು ಒತ್ತಾಯಿಸಿದರು.

ಮತದಾರರು ತಮ್ಮ ಹೆಸರು ಕರಡು ಮತದಾರರ ಪಟ್ಟಿಯಲ್ಲಿ ಇದೆಯೇ, ಯಾವುದೇ ನೋಟಿಸ್ ಅಥವಾ ಆಕ್ಷೇಪಣೆ ದಾಖಲಾಗಿದೆಯೇ ಹಾಗೂ ಅಗತ್ಯವಿದ್ದಲ್ಲಿ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸುವ ವಿಧಾನವೇನು ಎಂಬ ಕುರಿತು ಮಾಹಿತಿ ನೀಡಲು ನಾಗರಿಕ ಮತ ಕಾವಲು ಸಮಿತಿ ಮುಂದಾಗಿದೆ. ಮನೆಮನೆಗೆ ತೆರಳಿ ಜಾಗೃತಿ ಮೂಡಿಸುವುದರ ಜೊತೆಗೆ ಈ ಸಂಬಂಧ ವಿಶೇಷ ಅಪ್ಲಿಕೇಶನ್‌ವೊಂದನ್ನು ಸಿದ್ಧಪಡಿಸಲಾಗಿದೆ ಎಂದು ಅವರು ಹೇಳಿದರು.

ಸೆ.23ರಂದು ನಡೆಯುವ ಸಮಾಲೋಚನಾ ಸಭೆಯಲ್ಲಿ ಎಸ್‌ಐಆರ್ ಪ್ರಕ್ರಿಯೆಗೆ ಸಂಬಂಧಿಸಿದ ಗೊಂದಲಗಳು, ಮತಪಟ್ಟಿಯಲ್ಲಿ ಹೆಸರು ಇಲ್ಲದಿರುವ ಬಗ್ಗೆ ಅನುಮಾನ ಹೊಂದಿರುವವರು ಹಾಗೂ ಮತದಾರರ ಹಕ್ಕುಗಳ ಕುರಿತು ಮಾಹಿತಿ ಪಡೆಯಲು ಬಯಸುವವರು ಭಾಗವಹಿಸಬಹುದು ಎಂದು ಮಾರೆಪ್ಪ ಮನವಿ ಮಾಡಿದರು.

ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆ ಪಾರದರ್ಶಕವಾಗಿರಬೇಕು. ಮ್ಯಾಪಿಂಗ್ ಆಗದ ಮತದಾರರು, ವಿಳಾಸ ಬದಲಾಯಿಸಿದವರು, ನೋಟಿಸ್ ಪಡೆದವರು ಹಾಗೂ ಕರಡು ಪಟ್ಟಿಯಿಂದ ಹೊರಗುಳಿದವರ ಕುರಿತು ಚುನಾವಣಾ ಆಯೋಗ ಸಮಗ್ರ ಮಾಹಿತಿ ನೀಡಬೇಕು ಎಂದು ನಾಗರಿಕ ಮತ ಕಾವಲು ಸಮಿತಿ ಆಗ್ರಹಿಸಿದೆ.

ಪತ್ರಿಕಾಗೋಷ್ಠಿಯಲ್ಲಿ ಕಾಜಾ ಅಸ್ಲಾಂ, ಬಸವರಾಜ್, ಮಾರಮ್ಮ, ಎಂ.ಆರ್. ಬೇರಿ, ಆಂಜನೇಯ, ಹಸಿಮುದ್ದೀನ್, ಮುಸ್ತಾಕ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಜಿಲ್ಲಾ 12ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ ರಾಮಣ್ಣ ಹವಳೆ ಅವರಿಗೆ ಗೌರವ ಸನ್ಮಾನ



ರಾಯಚೂರು, ಸೆ.21: ರಾಯಚೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಅಕ್ಟೋಬರ್ 24 ಮತ್ತು 25ರಂದು ಹಮ್ಮಿಕೊಳ್ಳಲಾಗಿರುವ ರಾಯಚೂರು ಜಿಲ್ಲಾ 12ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಸರ್ವಾನುಮತದಿಂದ ಆಯ್ಕೆಯಾದ ಹಿರಿಯ ಸಾಹಿತಿ ರಾಮಣ್ಣ ಹವಳೆ ಅವರನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ಭಾನುವಾರ ಸಂಜೆ ಅವರ ಸ್ವಗೃಹಕ್ಕೆ ತೆರಳಿ ಅಭಿನಂದಿಸಿ ಗೌರವ ಸನ್ಮಾನ ಮಾಡಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ರಾಮಣ್ಣ ಹವಳೆ, “ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ನನ್ನನ್ನು ಆಯ್ಕೆ ಮಾಡಿರುವುದು ಸಂತಸದ ಸಂಗತಿ. ನನ್ನ ಮೇಲೆ ವಿಶ್ವಾಸವಿಟ್ಟು ಈ ಗೌರವ ನೀಡಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸುತ್ತೇನೆ” ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ರಂಗಣ್ಣ ಪಾಟೀಲ್ ಅಳ್ಳುಂಡಿ, ಗೌರವ ಕಾರ್ಯದರ್ಶಿಗಳಾದ ತಾಯಪ್ಪ ಬಿ. ಹೊಸೂರ, ಮಂಜುನಾಥ ಕಾಮಿನ್, ಗೌರವ ಕೋಶಾಧ್ಯಕ್ಷ ನಾಗಪ್ಪ ಹೊರಪ್ಯಾಟಿ, ಸಾಹಿತಿಗಳಾದ ಬಾಬು ಭಂಡಾರಿಗಲ್, ಮಹಾಂತೇಶ್ ಮಸ್ಕಿ, ವಿ.ಎನ್. ಅಕ್ಕಿ, ಭೀಮನಗೌಡ ಇಟಿಗಿ, ಎಚ್.ಎಚ್. ಮ್ಯಾದರ್, ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಬಿ. ವಿಜಯ ರಾಜೇಂದ್ರ, ಗೌರವ ಕಾರ್ಯದರ್ಶಿಗಳಾದ ರಾವುತರಾವ್ ಬರೂರ, ಪ್ರತಿಭಾ ಗೋನಾಳ್, ಗೌರವ ಕೋಶಾಧ್ಯಕ್ಷ ಸೈಯದ್ ಹಫೀಜುಲ್ಲಾ ಖಾದ್ರಿ, ಡಾ. ಮಹದೇವಪ್ಪ ನಾಗರಾಳ್, ವೆಂಕಣ್ಣ ಯಾದವ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ವಲಯ ಮಟ್ಟದ ಕ್ರೀಡಾಕೂಟ: ಖೋ-ಖೋ ಪಂದ್ಯದಲ್ಲಿ ಹಿರೇಕೊಟ್ನೇಕಲ್ ಶಾಲೆ ತಾಲೂಕು ಮಟ್ಟಕ್ಕೆ ಆಯ್ಕೆ



ಹಿರೇಕೊಟ್ನೇಕಲ್, ಸೆ.21: ಪ್ರಾಥಮಿಕ ಶಾಲೆಗಳ ವಲಯ ಮಟ್ಟದ ಕ್ರೀಡಾಕೂಟದ ಖೋ-ಖೋ ಪಂದ್ಯದಲ್ಲಿ ಹಿರೇಕೊಟ್ನೇಕಲ್ ಹರಿಜನವಾಡ ಪ್ರಾಥಮಿಕ ಶಾಲೆಯ ಬಾಲಕರ ತಂಡ ಪ್ರಥಮ ಸ್ಥಾನ ಪಡೆದು ತಾಲೂಕು ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದೆ.

ಸೋಮವಾರ ಪೋತ್ನಾಳ ಪ್ರೌಢಶಾಲಾ ಮೈದಾನದಲ್ಲಿ ನಡೆದ ವಲಯ ಮಟ್ಟದ ಕ್ರೀಡಾಕೂಟದಲ್ಲಿ ಹರಿಜನವಾಡ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಉತ್ತಮ ಕ್ರೀಡಾ ಕೌಶಲ್ಯ, ತಂಡದ ಒಗ್ಗಟ್ಟು ಹಾಗೂ ಕ್ರೀಡಾಸ್ಫೂರ್ತಿ ಪ್ರದರ್ಶಿಸಿ ಗಮನ ಸೆಳೆದರು. ಖೋ-ಖೋ ಪಂದ್ಯದಲ್ಲಿ ಎದುರಾಳಿ ತಂಡಗಳ ವಿರುದ್ಧ ಉತ್ತಮ ಪ್ರದರ್ಶನ ನೀಡಿದ ಬಾಲಕರ ತಂಡ ಪ್ರಥಮ ಸ್ಥಾನ ಪಡೆದು ಶಾಲೆಗೆ ಕೀರ್ತಿ ತಂದಿದೆ.

ವಿದ್ಯಾರ್ಥಿಗಳ ಈ ಸಾಧನೆಗೆ ಎಸ್‌ಡಿಎಂಸಿ ಅಧ್ಯಕ್ಷ ವೆಂಕಟೇಶ್ ನಾಯಕ, ಉಪಾಧ್ಯಕ್ಷೆ ಲಕ್ಷ್ಮಿ ದೇವಣ್ಣ, ಎಸ್‌ಡಿಎಂಸಿ ಸರ್ವ ಸದಸ್ಯರು, ಶಾಲೆಯ ಮುಖ್ಯಗುರು ರಾವುತರಾವ್ ಬರೂರ, ಕ್ರೀಡಾ ಮ್ಯಾನೇಜರ್ ಶಿವಗ್ಯಾನಿ, ತರಬೇತುದಾರ ಶಿಕ್ಷಕ ಪ್ರಕಾಶ ಜಿ.ಕೆ., ಶಾಲೆಯ ಶಿಕ್ಷಕರು ಹಾಗೂ ಪೋಷಕರು ಅಭಿನಂದನೆ ಸಲ್ಲಿಸಿದ್ದಾರೆ.

ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿಯೂ ವಿದ್ಯಾರ್ಥಿಗಳು ಉತ್ತಮ ಪ್ರದರ್ಶನ ನೀಡಿ ಮತ್ತಷ್ಟು ಯಶಸ್ಸು ಸಾಧಿಸಲಿ ಎಂದು ಶಾಲಾ ಕುಟುಂಬ ಶುಭ ಹಾರೈಸಿದೆ.

## ಇ-ಕೆವೈಸಿ ಸರ್ವರ್ ಸಮಸ್ಯೆ: ಗಡುವು ವಿಸ್ತರಿಸಲು ಒತ್ತಾಯ




ರಾಯಚೂರು, ಸೆ.21: ಪಡಿತರ ಚೀಟಿದಾರರ ಇ-ಕೆವೈಸಿ ಪ್ರಕ್ರಿಯೆಯಲ್ಲಿ ನಿರಂತರ ಸರ್ವರ್ ಸಮಸ್ಯೆ ಎದುರಾಗುತ್ತಿರುವುದರಿಂದ ಸಾರ್ವಜನಿಕರು ಹಾಗೂ ನ್ಯಾಯಬೆಲೆ ಅಂಗಡಿ ವಿತರಕರು ಸಂಕಷ್ಟ ಅನುಭವಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಇ-ಕೆವೈಸಿ ಪೂರ್ಣಗೊಳಿಸಲು ಕನಿಷ್ಠ 2ರಿಂದ 3 ತಿಂಗಳ ಹೆಚ್ಚುವರಿ ಕಾಲಾವಕಾಶ ನೀಡಬೇಕು ಎಂದು ಜಯ ಕರ್ನಾಟಕ ರಕ್ಷಣಾ ಸೇನೆಯ ಜಿಲ್ಲಾಧ್ಯಕ್ಷ ಎಚ್. ಸತ್ಯರಾಜ ಒತ್ತಾಯಿಸಿದ್ದಾರೆ.

ಈ ಸಂಬಂಧ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕರಿಗೆ ಮನವಿ ಸಲ್ಲಿಸಿರುವ ಅವರು, ಸರ್ಕಾರ ಪಡಿತರ ಚೀಟಿದಾರರಿಗೆ ಇ-ಕೆವೈಸಿ ಕಡ್ಡಾಯಗೊಳಿಸಿರುವುದು ಸರಿಯೇ ಆದರೂ, ತಾಂತ್ರಿಕ ಅಡಚಣೆಗಳಿಂದ ಪ್ರಕ್ರಿಯೆ ನಿರೀಕ್ಷಿತ ವೇಗದಲ್ಲಿ ಸಾಗುತ್ತಿಲ್ಲ ಎಂದು ತಿಳಿಸಿದ್ದಾರೆ.

ಸರ್ವರ್ ನಿಧಾನಗತಿಯ ಕಾರಣ ದಿನಕ್ಕೆ ಕೇವಲ 5ರಿಂದ 10 ಪಡಿತರ ಚೀಟಿಗಳ ಇ-ಕೆವೈಸಿ ಮಾತ್ರ ಪೂರ್ಣಗೊಳ್ಳುತ್ತಿದೆ. ಇದರಿಂದ ಸಾರ್ವಜನಿಕರು ದೀರ್ಘಕಾಲ ಕಾಯಬೇಕಾಗುತ್ತಿದ್ದು, ಕೆಲವೆಡೆ ಪಡಿತರದಾರರು ಮತ್ತು ವಿತರಕರ ನಡುವೆ ಮಾತಿನ ಚಕಮಕಿ ಉಂಟಾಗುತ್ತಿದೆ. ತಾಂತ್ರಿಕ ದೋಷಗಳಿಗೆ ವಿತರಕರನ್ನೇ ಹೊಣೆ ಮಾಡುವ ಪರಿಸ್ಥಿತಿ ನಿರ್ಮಾಣವಾಗಿರುವುದರಿಂದ ಅವರ ಮೇಲೂ ಅನಗತ್ಯ ಒತ್ತಡ ಹೆಚ್ಚುತ್ತಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ರಾಯಚೂರು ನಗರ ಮಾತ್ರವಲ್ಲದೆ ಗ್ರಾಮೀಣ ಭಾಗಗಳಲ್ಲಿಯೂ ಇದೇ ಸಮಸ್ಯೆ ಎದುರಾಗುತ್ತಿರುವುದರಿಂದ ಇ-ಕೆವೈಸಿ ಪ್ರಕ್ರಿಯೆಯ ಗಡುವನ್ನು ತಕ್ಷಣ ವಿಸ್ತರಿಸಬೇಕು. ಜೊತೆಗೆ ಸರ್ವರ್ ಸಾಮರ್ಥ್ಯವನ್ನು ಹೆಚ್ಚಿಸಿ ಯಾವುದೇ ಅಡಚಣೆ ಇಲ್ಲದೆ ಸಾರ್ವಜನಿಕರು ಇ-ಕೆವೈಸಿ ಮಾಡಿಸಿಕೊಳ್ಳುವಂತ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿದ್ದಾರೆ.

ತಾಂತ್ರಿಕ ಸಮಸ್ಯೆಗಳು ಬಗೆಹರಿಯುವ ಮುನ್ನವೇ ಗಡುವು ವಿಧಿಸುವುದರಿಂದ ಹಲವಾರು ಅರ್ಹ ಪಡಿತರ ಚೀಟಿದಾರರು ತೊಂದರೆಗೆ ಸಿಲುಕುವ ಸಾಧ್ಯತೆ ಇದೆ. ಆದ್ದರಿಂದ ಇಲಾಖೆಯು ಪ್ರಾಯೋಗಿಕ ಪರಿಸ್ಥಿತಿಯನ್ನು ಪರಿಗಣಿಸಿ ಸಾರ್ವಜನಿಕರಿಗೆ ಸಾಕಷ್ಟು ಕಾಲಾವಕಾಶ ನೀಡಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಸಂಘಟನೆಯ ಪ್ರಧಾನ ಕಾರ್ಯದರ್ಶಿ ಜೆಗ್ಗಿ ಉರುಕುಂದಪ್ಪ ಸೇರಿದಂತೆ ವಿವಿಧ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಅಂಜನಾದ್ರಿ ಸ್ನೇಹ ಶಕ್ತಿ ಕ್ರೆಡಿಟ್ ಸಹಕಾರಿ ಸಂಘಕ್ಕೆ ₹16.93 ಲಕ್ಷ ನಿವ್ವಳ ಲಾಭ; ಸದಸ್ಯರಿಗೆ ಶೇ.8 ಲಾಭಾಂಶ



ಕವಿತಾಳ: ಪಟ್ಟಣದ ಶ್ರೀ ಅಂಜನಾದ್ರಿ ಸ್ನೇಹ ಶಕ್ತಿ ಕ್ರೆಡಿಟ್ ಸೌಹಾರ್ದ ಸಹಕಾರಿ ಸಂಘ ನಿಯಮಿತದ 2025-26ನೇ ಸಾಲಿನ ವಾರ್ಷಿಕ ಸರ್ವಸದಸ್ಯರ ಮಹಾಸಭೆ ಸೋಮವಾರ ಸಂಘದ ಆವರಣದಲ್ಲಿ ನಡೆಯಿತು.

ಸಂಘದ ಅಧ್ಯಕ್ಷ ಶಿವರಾಜ್ ಪಾಟೀಲ್ ಡೋಣಮರಡಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಹಕಾರಿ ಕ್ಷೇತ್ರವು ಗ್ರಾಮೀಣ ಭಾಗದ ಆರ್ಥಿಕ ಚಟುವಟಿಕೆಗಳಿಗೆ ಬಲ ನೀಡುವಲ್ಲಿ ಪ್ರಮುಖ ಪಾತ್ರವಹಿಸುತ್ತಿದೆ. ರಾಷ್ಟ್ರೀಯ ಬ್ಯಾಂಕುಗಳಿಗಿಂತ ಸಹಕಾರಿ ಸಂಘಗಳು ಸದಸ್ಯರಿಗೆ ಹೆಚ್ಚು ಹತ್ತಿರವಾಗಿದ್ದು, ಅಗತ್ಯಕ್ಕೆ ತಕ್ಕಂತೆ ಸೇವೆಗಳನ್ನು ಒದಗಿಸುತ್ತಿವೆ. ಸಹಕಾರಿ ಸಂಘವು ಯಾರೊಬ್ಬರ ವೈಯಕ್ತಿಕ ಲಾಭಕ್ಕಾಗಿ ಕಾರ್ಯನಿರ್ವಹಿಸುವ ಸಂಸ್ಥೆಯಲ್ಲ; ಪ್ರತಿಯೊಬ್ಬ ಸದಸ್ಯರೂ ಸಂಘದ ಪಾಲುದಾರರು ಹಾಗೂ ಮಾಲೀಕರಾಗಿದ್ದಾರೆ ಎಂದು ಹೇಳಿದರು.

2026ರ ಮಾರ್ಚ್ 31ಕ್ಕೆ ಅಂತ್ಯಗೊಂಡ ಆರ್ಥಿಕ ವರ್ಷದ ವರದಿಯಂತೆ, ಸಂಘವು ₹16,93,989 ನಿವ್ವಳ ಲಾಭ ಗಳಿಸಿದೆ. ಸಂಘದ ಒಟ್ಟು ಆಸ್ತಿ ಮತ್ತು ಜವಾಬ್ದಾರಿಗಳ ಮೊತ್ತ ₹5,81,44,584 ಆಗಿದ್ದು, ₹37,89,700 ಸಂದಾಯವಾದ ಷೇರು ಬಂಡವಾಳ ಹಾಗೂ ₹5,09,85,022 ಠೇವಣಿ ಸಂಗ್ರಹಿಸಿದೆ ಎಂದು ಮಹಾಸಭೆಯಲ್ಲಿ ಮಾಹಿತಿ ನೀಡಲಾಯಿತು.

ವಿವಿಧ ಬ್ಯಾಂಕುಗಳಲ್ಲಿ ₹1,17,50,000 ಹೂಡಿಕೆ ಹೊಂದಿರುವ ಸಂಘವು ಸದಸ್ಯರ ಆರ್ಥಿಕ ಅಗತ್ಯಗಳಿಗೆ ₹4,23,79,960 ಸಾಲ ಮತ್ತು ಮುಂಗಡ ವಿತರಿಸಿದ್ದು, ₹7,99,640 ನಗದು ಶಿಲ್ಕು ಹೊಂದಿದೆ ಎಂದು ವರದಿಯಲ್ಲಿ ತಿಳಿಸಲಾಯಿತು. ಸಂಘದ ಆರ್ಥಿಕ ಪ್ರಗತಿ ಮತ್ತು ಸದಸ್ಯರ ಹಿತದೃಷ್ಟಿಯಿಂದ ಈ ಸಾಲಿನಲ್ಲಿ ಶೇ.8ರಷ್ಟು ಲಾಭಾಂಶ ಘೋಷಿಸಲಾಗಿದೆ ಎಂದು ಆಡಳಿತ ಮಂಡಳಿ ತಿಳಿಸಿತು.

ಮಹಾಸಭೆಯ ಅಂಗವಾಗಿ ಉತ್ತಮ ಗ್ರಾಹಕರನ್ನು ಹಾಗೂ ಪಿಯುಸಿ ಮತ್ತು ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಇದೇ ವೇಳೆ ಸಾಮಾಜಿಕ ಸೇವೆಯನ್ನು ಗುರುತಿಸಿ ಕಾಳಪ್ಪ ಪತ್ತಾರ್ ಮತ್ತು ಮಂಜುನಾಥ್ ಬಳ್ಳಾರಿ ಅವರಿಗೆ ಕೆ.ಯು.ಡಬ್ಲ್ಯೂ.ಜೆ. ರಾಜ್ಯಮಟ್ಟದ ವಾರ್ಷಿಕ ಪ್ರಶಸ್ತಿ ದೊರೆತ ಹಿನ್ನೆಲೆಯಲ್ಲಿ ಸಂಘದ ವತಿಯಿಂದ ಗೌರವಿಸಲಾಯಿತು.

ಸಭೆಯಲ್ಲಿ ಶ್ರೀಶೈಲಪ್ಪ ತಾತ, ಕರಿಯಪ್ಪ ತಾತ, ಸಿದ್ದಯ್ಯ ಸ್ವಾಮಿ, ಸಂಘದ ಉಪಾಧ್ಯಕ್ಷ ನಿಂಗಪ್ಪ ತೋಳದ, ಮುಖ್ಯ ಕಾರ್ಯನಿರ್ವಾಹಕ ಶಿವಕುಮಾರ್ ಸಾಲಿಮನಿ, ಸ್ಥಳೀಯ ಮುಖಂಡ ತಿಪ್ಪಯ್ಯಸ್ವಾಮಿ, ಗಿರಿಬಸವೇಶ್ವರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಆದನಗೌಡ ವಟಗಲ್, ಯಮನಪ್ಪ ದಿನ್ನಿ, ಮಂಜುನಾಥ ಪತ್ತಾರ, ಗಂಗಪ್ಪ ಎಕ್ಲಾಸ್ಪುರ, ಮೌನೇಶ್ ಪೂಜಾರಿ, ಹನುಮಂತ ಪಾಟಿಲ್, ಮಾಳಪ್ಪ ಸೇರಿದಂತೆ ಸಂಘದ ಸದಸ್ಯರು ಹಾಗೂ ವಿವಿಧ ಗಣ್ಯರು ಉಪಸ್ಥಿತರಿದ್ದರು.

## ಸೆ.24ರಿಂದ ಮಾನ್ವಿ ಬಡೇಸಾಹೇಬ್ ದರ್ಗಾ ಉರ್ಸ್-ಎ-ಶರೀಫ್



ಮಾನ್ವಿ: ಪಟ್ಟಣದ ಜುಮ್ಮಲದೊಡ್ಡಿಯ ಹಜರತ್ ಸೈಯದ್ ಷಾ ಮುರ್ತುಜಾ ಖಾದ್ರಿ ಅವರ ಬಡೇಸಾಹೇಬ್ ದರ್ಗಾದ ಉರ್ಸ್-ಎ-ಶರೀಫ್ ಕಾರ್ಯಕ್ರಮವು ಸೆ.24ರಿಂದ 26ರವರೆಗೆ ನಡೆಯಲಿದೆ ಎಂದು ಮುಸ್ಲಿಂ ಧರ್ಮಗುರು ಸೈಯದ್ ಸಜ್ಜದ್ ಹುಸೇನಿ ಮುತ್ವಲ್ಲಿ ಸಾಹೇಬ್ ತಿಳಿಸಿದರು.

ಪಟ್ಟಣದ ಜುಮ್ಮಲದೊಡ್ಡಿಯ ಬಡೇಸಾಹೇಬ್ ದರ್ಗಾ ಆವರಣದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆ.24ರಂದು ಗುರುವಾರ ರಾತ್ರಿ 8.30ಕ್ಕೆ ಬಡೇಸಾಹೇಬ್ ದರ್ಗಾದಿಂದ ಜಾಮಿಯಾ ಮಸೀದಿವರೆಗೆ ಸಂದಲ್ ಹಾಗೂ ಗಂಧದ ಮೆರವಣಿಗೆ ನಡೆಯಲಿದ್ದು, ಬಳಿಕ ಸಂದಲ್ ಅನ್ನು ಮರಳಿ ದರ್ಗಾಕ್ಕೆ ತರಲಾಗುವುದು ಎಂದು ತಿಳಿಸಿದರು.

ಗೌಸಿಯಾ ಪಾಕ್ ಅವರ ಗ್ಯಾರವಿ ಶರೀಫ್ ಅಂಗವಾಗಿ ಧ್ವಜಾರೋಹಣ ನೆರವೇರಿಸಲಾಗುವುದು. ಉರ್ಸ್‌ಗೆ ಆಗಮಿಸುವ ಸರ್ವಧರ್ಮದ ಭಕ್ತರಿಗೆ ಲಂಗರ್ ಮೂಲಕ ಅನ್ನದಾಸೋಹ ವ್ಯವಸ್ಥೆ ಮಾಡಲಾಗುವುದು. ಸೆ.25ರಂದು ಶುಕ್ರವಾರ ಮಧ್ಯಾಹ್ನ 2.30ಕ್ಕೆ ಉರ್ಸ್ ಕಾರ್ಯಕ್ರಮ ಹಾಗೂ ಸೆ.26ರಂದು ಶನಿವಾರ ಸಂಜೆ 5ಕ್ಕೆ ಝಿಯಾರತ್ ಕಾರ್ಯಕ್ರಮ ನಡೆಯಲಿದೆ ಎಂದು ಹೇಳಿದರು.

ಉರ್ಸ್-ಎ-ಶರೀಫ್‌ನಲ್ಲಿ ಚಿಕ್ಕಮಗಳೂರಿನ ದಾದಾ ಹಯಾತ್ ಖಲಂದರ್ ದರ್ಗಾದ ಸೈಯದ್ ಗೌಸ್ ಮೈನುದ್ದೀನ್ ಖಾದ್ರಿ, ಆದೋನಿಯ ಸೈಯದ್ ತಲಾಹ್ ಖಾದ್ರಿ, ರಾಯಚೂರು ಹೊಸೂರು ದರ್ಗಾದ ಸಜ್ಜಾದ್ ಸೈಯದ್ ಕರೀಮುಲ್ಲಾ ಖಾದ್ರಿ, ಸೈಯದ್ ನಬೀ ಮುಹಿದ್ದೀನ್ ಖಾದ್ರಿ, ಕೌತಾಳಂ ದರ್ಗಾದ ಸೈಯದ್ ಜೈನುಲ್ ಬದೀನ್ ಸೇರಿದಂತೆ ಜಂತಕಲ್, ಕಂಪ್ಲಿ, ಗಂಗಾವತಿ, ಸಿಂಧನೂರು, ಮಾನ್ವಿ ಹಾಗೂ ರಾಯಚೂರಿನ ವಿವಿಧ ದರ್ಗಾಗಳ ಧರ್ಮಗುರುಗಳು, ಉಲೇಮಾಗಳು ಹಾಗೂ ವಿವಿಧ ಪಕ್ಷಗಳ ಮುಖಂಡರು ಪಾಲ್ಗೊಳ್ಳಲಿದ್ದಾರೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಅವರು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಸೈಯದ್ ಸಜ್ಜದ್ ಹುಸೇನಿ ಮುತ್ವಲ್ಲಿ ಸಾಹೇಬ್ ಸೇರಿದಂತೆ ಮುಸ್ಲಿಂ ಸಮುದಾಯದವರು ದರ್ಗಾದಲ್ಲಿ ಉತ್ತಮ ಮಳೆಗಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಹಜರತ್ ಸೈಯದ್ ಷಾ ಇರ್ಫಾನ್ ಖಾದ್ರಿ ಸಾಹೇಬ್ ದರ್ಗಾ ಸಜ್ಜಾದ್ ನಶೀನ್, ಸೈಯದ್ ಅಬೀದ್ ಖಾದ್ರಿ ಸಾಹೇಬ್ ದರ್ಗಾ ಮುತ್ವಲ್ಲಿ ಗುರುಜಿ, ಸೈಯದ್ ರಿಯಾಜುದ್ದೀನ್ ಖಾದ್ರಿ ಸಾಹೇಬ್, ಸೈಯದ್ ಇಮ್ರಾನ್ ಖಾದ್ರಿ ಸಾಹೇಬ್, ಸೈಯದ್ ನುಸರತ್ ಖಾದ್ರಿ ಸಾಹೇಬ್, ಜನಾಬ್ ನಾಸೀರ್ ಖಾಜಿ ಸಾಹೇಬ್, ಸೈಯದ್ ನಜೀರುದ್ದೀನ್ ಖಾದ್ರಿ ಸಾಹೇಬ್, ಇಬ್ರಾಹಿಂ ಕುರೇಶಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಸೆಪ್ಟೆಂಬರ್ 23ರಂದು ಸಿಂಧನೂರಿನಲ್ಲಿ ಉದ್ಯಮಶೀಲತಾ ತರಬೇತಿ ಕಾರ್ಯಕ್ರಮ

ರಾಯಚೂರು ಸೆಪ್ಟೆಂಬರ್ 21 (ಕರ್ನಾಟಕ ವಾರ್ತೆ): ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್) ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಸ್ವಂತ ಉದ್ಯೋಗವನ್ನು ಸ್ಥಾಪಿಸಲು ಇಚ್ಚಿಸಿದ ಪರಿಶಿಷ್ಟ ಜಾತಿ ಮಹಿಳಾ ಅಭ್ಯರ್ಥಿಗಳಿಗೆ 10 ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ರಾಯಚೂರಿನ ಸಿಂಧನೂರಿನಲ್ಲಿ 2026ರ ಸೆಪ್ಟಂಬರ್ 23ರಂದು ಹಮ್ಮಿಕೊಳ್ಳಲಾಗುವುದು.

ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಉದ್ಯಮಶೀಲತೆಯ ಗುಣಲಕ್ಷಣಗಳು ಸ್ವಂತ ಉದ್ಯೋಗ ಸ್ಥಾಪಿಸಲು ಸರ್ಕಾರದ ಯೋಜನೆಗಳು, ಬ್ಯಾಂಕಿನ ವ್ಯವಹಾರ ಮತ್ತು ಸಾಲ ಸೌಲಭ್ಯಗಳ ಮಾಹಿತಿ ಹಾಗೂ ಸ್ವಯಂ ಉದ್ಯಮಗಳನ್ನು ಸ್ಥಾಪಿಸಲು ಇತ್ಯಾದಿ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು.

ರಾಯಚೂರು ಜಿಲ್ಲೆಯ ಆಸಕ್ತ ಪರಿಶಿಷ್ಟ ಜಾತಿ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು 18 ವರ್ಷ ದಿಂದ 40 ವರ್ಷ ವಯಸ್ಸಿನವರಾಗಿರಬೇಕು ಎಂಟನೇ ತರಗತಿ ಪಾಸಾಗಿರಬೇಕು ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತರಿರುವವರು ಸೆಪ್ಟಂಬರ್ 22ರೊಳಗಾಗಿ ಮೊಬೈಲ್ ಸಂಖ್ಯೆ: 9986600631ಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ತರಬೇತಿದಾರರು ಸಿಡಾಕ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ ನವೀನ ಆಸ್ಪತ್ರೆ ಪಕ್ಕದಲ್ಲಿ ರಾಯಚೂರು ಇಲ್ಲಿಗೆ ಬಂದು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಿಡಾಕ್ ತರಬೇತಿದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತುರ್ವಿಹಾಳ ವಾಸವಿ ವಿವಿಧೋದ್ದೇಶ ಸಹಕಾರ ಸಂಘಕ್ಕೆ ₹9.57 ಲಕ್ಷ ನಿವ್ವಳ ಲಾಭ



ಸಿಂಧನೂರು, ಸೆ.21: ಸದಸ್ಯರು, ಗ್ರಾಹಕರು, ಆಡಳಿತ ಮಂಡಳಿ ಹಾಗೂ ಸಿಬ್ಬಂದಿಯ ಸಹಕಾರದಿಂದ ತುರ್ವಿಹಾಳ ವಾಸವಿ ವಿವಿಧೋದ್ದೇಶ ಸಹಕಾರ ಸಂಘವು ಉತ್ತಮ ಆರ್ಥಿಕ ಪ್ರಗತಿ ಸಾಧಿಸಿದ್ದು, 2025-26ನೇ ಸಾಲಿನಲ್ಲಿ ₹13.72 ಕೋಟಿ ವಹಿವಾಟು ನಡೆಸಿ ₹9.57 ಲಕ್ಷ ನಿವ್ವಳ ಲಾಭ ಗಳಿಸಿದೆ ಎಂದು ಸಂಘದ ಅಧ್ಯಕ್ಷ ಎಂ.ಆರ್. ರಾಚಪ್ಪ ಶ್ರೇಷ್ಠಿ ತಿಳಿಸಿದರು.

ತಾಲೂಕಿನ ತುರ್ವಿಹಾಳದ ವಾಸವಿ ವಿವಿಧೋದ್ದೇಶ ಸಹಕಾರ ಸಂಘದಲ್ಲಿ ನಡೆದ 2025-26ನೇ ಸಾಲಿನ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೇವಲ ₹50 ಸಾವಿರ ಶೇರು ಬಂಡವಾಳದಿಂದ ಆರಂಭವಾದ ಸಂಘವು ಇಂದು ಉತ್ತಮ ಮಟ್ಟದ ಆರ್ಥಿಕ ಸ್ಥಿತಿಗೆ ತಲುಪಿದೆ. ಇದರ ಹಿಂದೆ ಸಂಘದ ಸದಸ್ಯರು ಮತ್ತು ಗ್ರಾಹಕರ ವಿಶ್ವಾಸ, ಆಡಳಿತ ಮಂಡಳಿ ನಿರ್ದೇಶಕರ ನಿಸ್ವಾರ್ಥ ಸೇವೆ ಹಾಗೂ ಸಿಬ್ಬಂದಿಯ ಪ್ರಾಮಾಣಿಕ ಕಾರ್ಯನಿರ್ವಹಣೆ ಪ್ರಮುಖ ಕಾರಣವಾಗಿದೆ ಎಂದರು.

ಗ್ರಾಹಕರು ಹಣವನ್ನು ಮನೆಯಲ್ಲಿ ಇಟ್ಟುಕೊಳ್ಳುವುದಕ್ಕಿಂತ ಸಹಕಾರ ಸಂಘ ಅಥವಾ ಬ್ಯಾಂಕ್‌ಗಳಲ್ಲಿ ಠೇವಣಿ ಇಡುವ ಮೂಲಕ ಸಂಘಗಳ ಆರ್ಥಿಕ ಚಟುವಟಿಕೆಗೆ ಕೈಜೋಡಿಸಬೇಕು. ಸದಸ್ಯರ ಹೆಚ್ಚಿನ ಸಹಕಾರ ದೊರೆತಷ್ಟೂ ಸಹಕಾರಿ ಸಂಸ್ಥೆಗಳು ಮತ್ತಷ್ಟು ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಹೇಳಿದರು.

ಸಭೆಯನ್ನು ಸಂಘದ ಉಪಾಧ್ಯಕ್ಷ ಸಿ. ವೆಂಕಟೇಶ ಶ್ರೇಷ್ಠಿ ಉದ್ಘಾಟಿಸಿ ಶುಭ ಹಾರೈಸಿದರು. ಸಂಘದ ಮುಖ್ಯ ಕಾರ್ಯನಿರ್ವಾಹಕ ಕೆ. ನಾಗರಾಜ ಶ್ರೇಷ್ಠಿ 2025-26ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸಿ, ಸಂಘದ ವಹಿವಾಟು, ಲಾಭ ಹಾಗೂ ವಿವಿಧ ಚಟುವಟಿಕೆಗಳ ಕುರಿತು ಮಾಹಿತಿ ನೀಡಿದರು.

ಮಹಾಸಭೆಯಲ್ಲಿ ಸಂಘವು ಗಳಿಸಿದ ನಿವ್ವಳ ಲಾಭದಲ್ಲಿ ಶೇ.25ರಷ್ಟು ಮೊತ್ತವನ್ನು ಕಾಯ್ದಿಟ್ಟ ನಿಧಿಗೆ ಮೀಸಲಿಟ್ಟು, ಉಳಿದ ಲಾಭದಲ್ಲಿ ಶೇ.2ರಷ್ಟು ಸಹಕಾರ ಶಿಕ್ಷಣ ನಿಧಿಯ ಚೆಕ್ ಅನ್ನು ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟದ ಮೂಲಕ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳಕ್ಕೆ ಪಾವತಿಸಲಾಯಿತು.

ಸಭೆಯಲ್ಲಿ ಸಂಘದ ನಿರ್ದೇಶಕರಾದ ಬಿ. ರುದ್ರಗೌಡ, ಈ. ಆಂಜನೇಯ್ಯ ಶ್ರೇಷ್ಠಿ, ಬಿ. ಪ್ರಾಣೇಶ ಶ್ರೇಷ್ಠಿ, ತಿರುಪತೆಪ್ಪ ಆಯನೂರು, ಎಂ.ಆರ್. ಹನುಮೇಶ ಶ್ರೇಷ್ಠಿ, ಜಿ. ಸಿದ್ಧೇಶ್ವರ, ಕೆ. ಬಸವರಾಜ ಶ್ರೇಷ್ಠಿ, ಕೆ. ವೆಂಕಮ್ಮ ಶ್ರೀನಿವಾಸ ಶ್ರೇಷ್ಠಿ, ಕೆ. ಪುಷ್ಪಾ ವಿಜಯಕುಮಾರ ಶ್ರೇಷ್ಠಿ, ಜೆ. ಶಾರದಾ ಹನುಮಂತಯ್ಯ ಶ್ರೇಷ್ಠಿ, ಪುಷ್ಪಾ ತಿಮ್ಮಣ್ಣ ಭೋವಿ ಹಾಗೂ ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟದ ವ್ಯವಸ್ಥಾಪಕ ಮಲ್ಲಿಕಾರ್ಜುನ ಎಂ. ಅಮ್ಮಿನಭಾವಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಆರಂಭವಾಯಿತು. ಸಂಘದ ಸಿಬ್ಬಂದಿ ಪ್ರಿಯಾಂಕ ಸ್ವಾಗತಿಸಿದರು. ಕೆ.ವಿ. ಮಂಜುನಾಥ ಶ್ರೇಷ್ಠಿ ಮತ್ತು ಮುಸ್ತಾಫಾ ಕಾರ್ಯಕ್ರಮ ನಿರೂಪಿಸಿದರು. ಕೊನೆಯಲ್ಲಿ ಕೆ. ಐಶ್ವರ್ಯ ವಂದನಾರ್ಪಣೆ ಮಾಡಿದರು.

## ಶ್ರೀ ವಟಗಲ್ ಬಸವೇಶ್ವರ ಸೌಹಾರ್ದ ಪತ್ತಿನ ಸಹಕಾರಿ ಸಂಘಕ್ಕೆ ₹27.28 ಲಕ್ಷ ನಿವ್ವಳ ಲಾಭ; ಸದಸ್ಯರಿಗೆ ಶೇ.13 ಲಾಭಾಂಶ



ಕವಿತಾಳ: ರಾಯಚೂರು ಜಿಲ್ಲೆಯ ಸಿರವಾರ ತಾಲೂಕಿನ ಪ್ರಮುಖ ವಾಣಿಜ್ಯ ಕೇಂದ್ರವಾದ ಕವಿತಾಳ ಪಟ್ಟಣದ ಶ್ರೀ ವಟಗಲ್ ಬಸವೇಶ್ವರ ಸೌಹಾರ್ದ ಪತ್ತಿನ ಸಹಕಾರಿ ಸಂಘ ನಿಯಮಿತದ 2025-26ನೇ ಸಾಲಿನ 7ನೇ ವಾರ್ಷಿಕ ಸಾಮಾನ್ಯ ಸಭೆ ಸೋಮವಾರ ಸಂಘದ ಆವರಣದಲ್ಲಿ ನಡೆಯಿತು.

ಮಹಾಸಭೆಯಲ್ಲಿ ಸಂಘದ ಸದಸ್ಯರಿಗೆ ಶೇ.13ರಷ್ಟು ಲಾಭಾಂಶ ಘೋಷಿಸಲಾಯಿತು. 2025-26ನೇ ಸಾಲಿನಲ್ಲಿ ಸಂಘವು ₹27,28,323.26 ನಿವ್ವಳ ಲಾಭ ಗಳಿಸಿರುವುದಾಗಿ ವಾರ್ಷಿಕ ವರದಿಯಲ್ಲಿ ತಿಳಿಸಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಘದ ಅಧ್ಯಕ್ಷ ಶಿವರಾಜಪ್ಪಗೌಡ ಪೊಲೀಸ್ ಪಾಟೀಲ್, ಸಹಕಾರಿ ಸಂಘವು ಕೇವಲ ಆರ್ಥಿಕ ವಹಿವಾಟಿಗೆ ಸೀಮಿತವಾಗದೆ ಸದಸ್ಯರು ಹಾಗೂ ಗ್ರಾಹಕರ ಸಂಕಷ್ಟಗಳಿಗೆ ಸ್ಪಂದಿಸುವ ಸಂಸ್ಥೆಯಾಗಬೇಕು ಎಂದರು. ಸದಸ್ಯರ ವಿಶ್ವಾಸ, ಹಿತಾಸಕ್ತಿ ರಕ್ಷಣೆ ಮತ್ತು ಆರ್ಥಿಕ ನೆರವು ನೀಡುವುದೇ ಸಂಘದ ಪ್ರಮುಖ ಗುರಿಯಾಗಿದೆ. ಎಲ್ಲರ ಸಹಕಾರದಿಂದ ಸಂಘವು ಉತ್ತಮ ಪ್ರಗತಿ ಸಾಧಿಸಿದ್ದು, ಮುಂದಿನ ದಿನಗಳಲ್ಲಿಯೂ ಸಂಘದ ಸರ್ವತೋಮುಖ ಅಭಿವೃದ್ಧಿಗೆ ಸದಸ್ಯರು ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಬಸವರಾಜ್ ಪಾಟೀಲ್, ಸಹಕಾರಿ ತತ್ವದಡಿ ಸದಸ್ಯರು ಹಾಗೂ ಗ್ರಾಹಕರ ಆರ್ಥಿಕ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ. ಆಡಳಿತ ಮಂಡಳಿಯು ಪಾರದರ್ಶಕತೆ ಮತ್ತು ಪ್ರಾಮಾಣಿಕತೆಯಿಂದ ಸಂಘವನ್ನು ಮುನ್ನಡೆಸುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದು ಹೇಳಿದರು.

ಸಂಘದ ಉಪಾಧ್ಯಕ್ಷ ಪ್ರಕಾಶ್ ಇಲ್ಲೂರ್ ಅವರು 2025-26ನೇ ಸಾಲಿನ ವಾರ್ಷಿಕ ವರದಿಯನ್ನು ಸಭೆಯ ಮುಂದೆ ಮಂಡಿಸಿ, ಸಂಘದ ಆರ್ಥಿಕ ಪ್ರಗತಿ ಹಾಗೂ ಚಟುವಟಿಕೆಗಳ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಶಿವರಾಜಪ್ಪಗೌಡ ಪೊಲೀಸ್ ಪಾಟೀಲ್, ಉಪಾಧ್ಯಕ್ಷ ಪ್ರಕಾಶ್ ಇಲ್ಲೂರ್, ನಿರ್ದೇಶಕರಾದ ವೀರಭದ್ರಪ್ಪ ಹಳ್ಳಿ, ಬಸವರಾಜ್ ಪಾಟೀಲ್, ಪಂಪಾಪತಿ ಅಂಗಡಿ, ನಾಗರಾಜ್ ಪಾಟೀಲ್, ತ್ರಿಪುರಾಂತಕ ಅಂಗಡಿ, ಬಾಲರಾಜ್ ನಾಯಕ್, ಅನಿತಾ ಭರತರಾಜ್, ಶಿವಪುತ್ರ ಭೋಗಾವತಿ, ತ್ರಿಶೂಲದರ ನಿಡಿಗಾಳ್, ಪ್ರವೀಣ್ ಕುಮಾರ್ ಹಣಿಗಿ, ಶಿವನಗೌಡ ಪೊಲೀಸ್ ಪಾಟೀಲ್, ಈರಪ್ಪ ಜಡಿಜ್ರ, ಗಂಗಾಧರ್ ಬಡಿಗೇರ, ಹನುಮಂತ ಚಲುವಾದಿ, ಸಮರ್ಥ, ಅತಿಥಿಗಳಾದ ರಾಮಮೂರ್ತಿ ಇಲ್ಲೂರ, ಶರಣಪ್ಪ ವೀರನಗೌಡ್ರು, ಸಂಘದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲನಗೌಡ ಅಂಗಡಿ ಹಾಗೂ ಸಿಬ್ಬಂದಿಗಳಾದ ದುರುಗಪ್ಪ, ರೆಡ್ಡಪ್ಪ, ಮಹೇಶ್ ಪಾಟೀಲ್, ಬಸವರಾಜ ಕೆಂಜೋಡಿ ಸೇರಿದಂತೆ ಸದಸ್ಯರು ಉಪಸ್ಥಿತರಿದ್ದರು.

## ಗೌರಿ-ಗಣೇಶ ಹಬ್ಬ: ಜಿಲ್ಲೆಯಲ್ಲಿ ಸೆ. 22, 24, 26 28ರಂದು ಮದ್ಯ ಮಾರಾಟ ನಿಷೇಧ

ಕೊಪ್ಪಳ ಸೆಪ್ಟೆಂಬರ್ 21 (ಕರ್ನಾಟಕ ವಾರ್ತೆ): 2026ನೇ ಸಾಲಿನ ಗೌರಿ-ಗಣೇಶ ಹಬ್ಬದ ಆಚರಣೆಯ ಸಂದರ್ಭದಲ್ಲಿ ಜಿಲ್ಲೆಯಾದ್ಯಂತ ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಸೆಪ್ಟೆಂಬರ್ 22 ರಿಂದ ಸೆ. 28ರವರೆಗೆ ನಾಲ್ಕು ದಿನಗಳ ಕಾಲ ಜಿಲ್ಲೆಯ ವಿವಿಧೆಡೆ ಮದ್ಯ ಮಾರಾಟವನ್ನು ನಿಷೇಧಿಸಿ ಕೊಪ್ಪಳ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಆದೇಶ ಹೊರಡಿಸಿದ್ದಾರೆ.

ಗೌರಿ-ಗಣೇಶ ಹಬ್ಬದ ವೇಳೆ ಯಾವುದೇ ಅಹಿತಕರ ಘಟನೆಗಳು ಅಥವಾ ಗಲಾಟೆಗಳು ನಡೆಯದಂತೆ ಮುನ್ನೆಚ್ಚರಿಕೆ ವಹಿಸಲು ಕೊಪ್ಪಳ ಜಿಲ್ಲಾ ಪೊಲೀಸ್ ಅಧೀಕ್ಷಕರು ಸಲ್ಲಿಸಿದ್ದ ಪ್ರಸ್ತಾವನೆಯನ್ನು ಪರಿಗಣಿಸಿ, ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 21ರ ಅನ್ವಯ ಈ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

ಅದರಂತೆ ಸೆಪ್ಟೆಂಬರ್ 22, 24 ಮತ್ತು ಸೆ. 26 ರಂದು ಕೊಪ್ಪಳ ಜಿಲ್ಲೆಯಾದ್ಯಂತ ಹಾಗೂ ಸೆ. 28 ರಂದು ಗಂಗಾವತಿ ತಾಲೂಕು ಮತ್ತು ಕನಕಗಿರಿ ಪೊಲೀಸ್ ಠಾಣಾ ವ್ಯಾಪ್ತಿಯೊಳಗೆ ಬೆಳಿಗ್ಗೆ 6 ಗಂಟೆಯಿಂದ ರಾತ್ರಿ 11 ಗಂಟೆಯವರೆಗೆ ಮದ್ಯ ಮಾರಾಟವನ್ನು ನಿಷೇಧಿಸಲಾಗಿದೆ. ಮದ್ಯ ಮಾರಾಟ ನಿಷೇಧ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಅಬಕಾರಿ ಉಪ ಆಯುಕ್ತರ ನೇತೃತ್ವದಲ್ಲಿ ವಿಶೇಷ ತನಿಖಾ ತಂಡವನ್ನು ರಚಿಸಲಾಗಿದೆ. ಈ ತಂಡದಲ್ಲಿ ಆರಕ್ಷಕ ವೃತ್ತ ನಿರೀಕ್ಷಕರು ಹಾಗೂ ಅಬಕಾರಿ ಅಧಿಕಾರಿಗಳು ಕಾರ್ಯನಿರ್ವಹಿಸಲಿದ್ದು, ಆದೇಶ ಉಲ್ಲಂಘಿಸುವವರ ವಿರುದ್ಧ ನಿಯಮಾನುಸಾರ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಜಿಲ್ಲಾಧಿಕಾರಿಗಳು ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ.

